# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**

ಬದುಕಿನಲ್ಲಿ ಏನೇ ನಡೆದರೂ ಒಳ್ಳೇಯದೇ..
ವರ್ತಮಾನದಲ್ಲಿ ಏನಾಗುತ್ತಿದೆಯೋ ಅದೆಲ್ಲವೂ
ಉತ್ತಮವಾಗಿಯೇ ನಡೆಯುತ್ತಿದೆ..
ಮುಂದೆ ಏನಾಗಲಿದೆಯೋ ಅದು ಕೂಡ
ಚೆನ್ನಾಗಿಯೇ ನಡೆಯಲಿದೆ..
ಭವಿಷ್ಯದ ಬಗ್ಗೆ ಎಂದಿಗೂ ಚಿಂತಿಸಬೇಡಿ
ವರ್ತಮಾನದಲ್ಲಿಯೇ ಜೀವಿಸಿ..
**ಭಗವಾನ್ ಶ್ರೀಕೃಷ್ಣ**



PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 14-11-2025 to 20-11-2025 ಬೆಲೆ:10-00 ಸಂಪುಟ–1 ಸಂಚಿಕೆ–7 ಪುಟಗಳು–6




ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು



ರಾಷ್ಟ್ರ ರಾಜಧಾನಿ ದೆಹಲಿಯ ಕೆಂಪು ಕೋಟೆಯ ಬಳಿ ನಡೆದ ಕಾರು ಸ್ಫೋಟದಿಂದ 12 ಜನ ಮೃತಪಟ್ಟು ಮೂವತ್ತಕ್ಕೂ ಹೆಚ್ಚು ಜನ ಗಾಯಗೊಂಡಿದ್ದಾರೆ. ಈ ಘಟನೆ ದೇಶವನ್ನೆ ಬೆಚ್ಚಿ ಬೀಳಿಸಿದ್ದಂತು ಸತ್ಯ. ಇದರಿಂದ ದೇಶದ ಪ್ರಮುಖ ಪಟ್ಟಣಗಳಲ್ಲಿ ಎಚ್ಚರಿಕೆ ವಹಿಸಲಾಗುತ್ತಿದೆ. ಕೆಲವರಂತೂ ಈ ಘಟನೆಯನ್ನು ಭದ್ರತಾ ವ್ಯವಸ್ಥೆಯ ವಿಫಲತೆ ಎಂದು ಬಣ್ಣಿಸಿದ್ದಾರೆ. ಬೂತಾನ್ ಪ್ರವಾಸದಲ್ಲಿದ್ದ ಪ್ರಧಾನಿ ಥಿಂಫುನಿನಲ್ಲಿ "ನಮ್ಮ ತನಿಖಾ ಸಂಸ್ಥೆಗಳು ಈ ವಿಷಯವನ್ನು ಸಂಪೂರ್ಣವಾಗಿ ತನಿಖೆ ಮಾಡುತ್ತವೆ ಮತ್ತು ಘಟನೆಗೆ ಕಾರಣರಾದವರನ್ನು ನ್ಯಾಯದ ಕಟಕಟೆಗೆ ತರಲಾಗುತ್ತದೆ" ಎಂದು ಹೇಳಿದ್ದಾರೆ. ನಂತರ ಭಾರತಕ್ಕೆ ಆಗಮಿಸಿದ ಪ್ರಧಾನಿ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳಿಗೆ ಸಾಂತ್ವಾನ ಹೇಳಿದ್ದಾರೆ.

## ಬಿಹಾರದಲ್ಲಿ ನಿರೀಕ್ಷೆ ಮೀರಿದ ಗೆಲುವು: ಬಿ.ಎಸ್.ವೈ



**ಶಿವಮೊಗ್ಗ:** ನಿರೀಕ್ಷೆಗೂ ಮೀರಿ ಬಿಹಾರ ಚುನಾವಣೆಯಲ್ಲಿ ಬಿಜೆಪಿಯ ಮೈತ್ರಿ ಗೆಲುವು ಸಾಧಿಸಲಿದೆ ಎಂದು ಮಾಜಿ ಸಿಎಂ ಹಾಗೂ ಬಿಜೆಪಿಯ ಕೇಂದ್ರ ಸಂಸದಿಯ ಮಂಡಳಿಯ ಸದಸ್ಯ ಬಿ.ಎಸ್. ಯಡಿಯೂರಪ್ಪ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಶಿವಮೊಗ್ಗದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ ನಮ್ಮ ನಿರೀಕ್ಷೆ ಮೀರಿ ಬಿಹಾರ ಚುನಾವಣೆಯಲ್ಲಿ ಪ್ರಧಾನ ಮಂತ್ರಿ ಮೋದಿ ಹಾಗೂ ಅಮಿತ್ ಷಾ ಅವರ ಪರಿಶ್ರಮ ದಿಂದ ಚುನಾವಣೆಯಲ್ಲಿ ಈಗಾಗಲೇ ಗೆದ್ದಿದ್ದೇವೆ. ಚುನಾವಣೆಯಲ್ಲಿ ಕಾಂಗ್ರೆಸ್ **3ನೇ ಪುಟಕ್ಕೆ**

## ಚುನಾವಣೋತ್ತರ ಸಮೀಕ್ಷೆಯಲ್ಲಿ ನಂಬಿಕೆ ಇಲ್ಲ –ಡಿಕೆಶಿ

**ಬೆಂಗಳೂರು:** ನಾವು ಚುನಾವಣೋತ್ತರ ಸಮೀಕ್ಷೆಯನ್ನು ನಂಬುವುದಿಲ್ಲ. ಕರ್ನಾಟಕ ಚುನಾವಣೆ ವೇಳೆಯೂ ನಾನು ಈ ಸಮೀಕ್ಷೆಗಳನ್ನು ನಂಬಿರಲಿಲ್ಲ. ಯಾವ ಸಮೀಕ್ಷೆಗಳು ನಾವು ಅಧಿಕಾರಕ್ಕೆ ಬರುತ್ತೇವೆ ಎಂದು ಹೇಳಿರಲಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿ ಹೇಳಿದ್ದಾರೆ. ಅವರು ವಿಧಾನಸೌಧದಲ್ಲಿ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿ, ಈ ಸಮೀಕ್ಷೆಗಳು ನಮ್ಮ ಪರ ತೋರಿಸಿದರೂ ನಾನು ನಂಬುವುದಿಲ್ಲ. ತಟ್ಟೆಮರೆ ಏಟು ಯಾವ ರೀತಿ ಬೀಳುತ್ತದೆ ಎಂದು ಹೇಳಲು ಸಾಧ್ಯವಿಲ್ಲ. ರಾಜ್ಯದಲ್ಲಿನಡೆದ ಉಪಚುನಾವಣೆ ವೇಳೆಯೂ ನಾನು ಮೂರಕ್ಕೆ ಮೂರು ಗೆಲ್ಲುತ್ತೇವೆ ಎಂದು ಹೇಳಿದ್ದೆ. ಫಲಿತಾಂಶ ಬರಲಿ, ಇಲ್ಲಿ ಅನೇಕ ವಿಚಾರಗಳ ಬಗ್ಗೆ ಚರ್ಚೆ ಮಾಡಬೇಕಿದೆ. ಬಿಹಾರದ ಜನ ಬದಲಾವಣೆ ಬಯಸುತ್ತಿದ್ದು, ಮಹಾಘಟಬಂಧನ ಗೆಲ್ಲುವ ಭರವಸೆ ಇದೆ. ಜನ ನೀಡುವ ಆಶೀರ್ವಾದ ನಿರಂತರ ಪ್ರಕ್ರಿಯೆ. ಗೆಲುವು **3ನೇ ಪುಟಕ್ಕೆ**



## ಮಂಗಳೂರು ವಕೀಲರನ್ನೂ ಕಾಡುತ್ತಿರುವ ಜೈಲು ಜಾಮರ್..!

**ಮಂಗಳೂರು:** ನಗರದ ಕೇಂದ್ರ ಭಾಗದಲ್ಲಿರುವ ಜಿಲ್ಲಾ ಕಾರಾಗೃಹದ ಜಾಮರ್‌ನಿಂದ ಸುತ್ತಮುತ್ತಲಿನ ಪ್ರದೇಶದ ಜನ ಸಾಮಾನ್ಯರು ನೆಟ್ವರ್ಕ್ ಸಮಸ್ಯೆಯಿಂದ ಬಳಲುತ್ತಿರುವುದು ವಿಷಯವಲ್ಲ. ಇದೀಗ ಜಾಮರ್ ಸಮಸ್ಯೆಯ ಬಿಸಿ ಕಾರಾಗೃಹದಿಂದ ಸುಮಾರು 800 ಮೀ. ದೂರದಲ್ಲಿರುವ ನ್ಯಾಯಾಲಯಕ್ಕೂ ತಟ್ಟಿದ್ದು, ವಕೀಲರಿಗೆ ಕಾರ್ಯನಿರ್ವಹಿಸಲು ಕಷ್ಟವಾಗುತ್ತಿದೆ ಎಂಬ ಆರೋಪ ಕೇಳಿ ಬಂದಿದೆ. ಆದ್ದರಿಂದ ಜಾಮರ್‌ನಿಂದ ಸ್ಥಳೀಯರಿಗೆ ತೊಂದರೆಯಾಗದಂತೆ ಸರ್ಕಾರ ನೋಡಿಕೊಳ್ಳಬೇಕು **3ನೇ ಪುಟಕ್ಕೆ**








## ಬಿಹಾರದಲ್ಲಿ ನಿರೀಕ್ಷೆ ಮೀರಿದ ಗೆಲುವು: ಬಿ.ಎಸ್.ವೈ

ಒಂದನೇ ಪುಟದಿಂದ......

ಅರ್ಡಸ್ ಇಲ್ಲದಂತೆ ಆಗಿದೆ. ಈಗಾಗಲೇ ಎಲ್ಲಾ ಸಮೀಕ್ಷೆಗಳು ಅದನ್ನೇ ಹೇಳುತ್ತಿವೆ. ದೊಡ್ಡ ಗೆಲುವು ಸಾಧಿಸಲಿದ್ದೇವೆ. ಬಿಹಾರದ ಚುನಾವಣೆಯ ಫಲಿತಾಂಶದ ನಂತರ ಎಲ್ಲ ತಿಳಿದು ಬರಲಿದೆ ಎಂದು ತಿಳಿಸಿದರು. ಬಿಹಾರ ರಾಜ್ಯ ವಿಧಾನಸಭೆಗೆ ಎರಡನೇ ಹಂತದ ಮತದಾನ ಅಧಿಕೃತವಾಗಿ ಮುಕ್ತಾಯಗೊಂಡಿದ್ದು, ವಿವಿಧ ಮಾಧ್ಯಮಗಳು ಚುನಾವಣೋತ್ತರ ಸಮೀಕ್ಷೆಗಳನ್ನು ಪ್ರಕಟಿಸಿದ್ದು, ಇದರಲ್ಲಿ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (NDA) ಮೇಲುಗೈ ಸಾಧಿಸಿದೆ ಎಂದು ತೋರಿಸಿವೆ. ಸಮೀಕ್ಷೆಗಳು NDA ಈ ಬಾರಿಯ ಚುನಾವಣೆಯಲ್ಲಿ ಕ್ಲೀನ್ ಸ್ವೀಪ್ ಮಾಡಲಿದೆ ಎಂದು ಭವಿಷ್ಯ ನುಡಿದಿದೆ. ಇದು NDAಗೆ ಕನಿಷ್ಠ 147 ಮತ್ತುಗರಿಷ್ಠ 20 ಹೆಚ್ಚುವರಿ ಸ್ಥಾನಗಳನ್ನು ಪಡೆಯಲಿದೆ ಎಂದು ಹೇಳಿದೆ. ಮಹಾಘಟಬಂಧನ್‌ಗೆ ಅದು ಗರಿಷ್ಠ 90 ಸ್ಥಾನಗಳ ಅಂಕಿ- ಸಂಖ್ಯೆಯನ್ನು ನೀಡಿದ್ದು, ವಿರೋಧ ಪಕ್ಷಗಳ ಮೈತ್ರಿಕೂಟ ಮಹಾಘಟ ಬಂಧನ್ ತನ್ನ ಕೆಳಮಟ್ಟದ ಸರ್ಕ್ಯೂಟ್ ಅನ್ನು ತಲುಪಿದರೆ ಕನಿಷ್ಠ 70 ಸ್ಥಾನಗಳನ್ನು ಪಡೆದುಕೊಳ್ಳಲಿದೆ ಎಂದು ಭವಿಷ್ಯ ನುಡಿದಿದೆ.

## ಮಂಗಳೂರು ವಕೀಲರನ್ನೂ ಕಾಡುತ್ತಿರುವ ಜೈಲು ಜಾಮರ್...!

ಒಂದನೇ ಪುಟದಿಂದ......

ಎಂದು ವಕೀಲರು ಗಡುವು ನೀಡಿದ್ದಾರೆ. ಇಲ್ಲವಾದಲ್ಲಿ ಮಂಗಳೂರು ವಕೀಲರ ಸಂಘವು ಸರಕಾರಕ್ಕೆ ಉಗ್ರ ಪ್ರತಿಭಟನೆಯ ಎಚ್ಚರಿಕೆಯನ್ನು ರವಾನಿಸಿದೆ. ಜೈಲಿನೊಳಗಿರುವ ಕೈದಿಗಳಿಗೆ ಸಿಗುವ ನೆಟ್ವರ್ಕ್, ಜೈಲಿನ ಸುತ್ತಮುತ್ತ ಇರುವ ಸಾರ್ವಜನಿಕರಿಗೆ ಸಿಗುತ್ತಿಲ್ಲ. ಹೊರಗೆ ನಾವು ನೆಟ್ವರ್ಕ್ ಸಮಸ್ಯೆ ಎದುರಿಸಬೇಕಾಗಿ ಬಂದಿದೆ. ಕೋರ್ಟ್‌ನಲ್ಲಿ ಮೊಬೈಲ್ ಫೋನ್‌ನಲ್ಲಿಕಕ್ಷಿದಾರರೊಂದಿಗೆ ಮಾತನಾಡಲು ಸಾಧ್ಯವಾಗುತ್ತಿಲ್ಲ. ಯಾರನ್ನು ಸಂಪರ್ಕಿಸುವುದಕ್ಕೂ ಸಾಧ್ಯ ಆಗುತ್ತಿಲ್ಲ. ಇದರಿಂದ ನಮ್ಮಕಾರ್ಯವೈಖರಿಗೆ ಬಹಳ ತೊಂದರೆಯಾಗುತ್ತಿದೆ ಎಂದು ಆರೋಪಿಸಿ ಹೈಕೋರ್ಟ್‌ಗೆ ಮಂಗಳೂರು ವಕೀಲರು ಅರ್ಜಿ ಸಲ್ಲಿಸಿದ್ದಾರೆ. ಈ ಅರ್ಜಿಯನ್ನು ಪರಿಗಣಿಸಿರುವ ಹೈಕೋರ್ಟ್ ನ್ಯಾಯಪೀಠ ಜೈಲಿನಲ್ಲಿ ಅಳವಡಿಸಲಾಗಿರುವ ಜಾಮರ್‌ನ ರೇಂಜ್ ಎಷ್ಟಿದೆ. ಯಾವ ರೀತಿ ಕಾರ್ಯ ನಿರ್ವಹಿಸುತ್ತಿದೆ ಎಂಬ ಬಗ್ಗೆ ವರದಿ ನೀಡುವಂತೆ ಹೇಳಿದೆ. ಒಟ್ಟಿನಲ್ಲಿ ಖೈದಿಗಳು ಮೊಬೈಲ್ ಬಳಕೆ ಮಾಡದಂತೆ ಮಾಡಲು ಹಾಕಿರುವಜಾಮರ್ ಸಾರ್ವಜನಿಕರಿಗೆ ಸಂಕಷ್ಟ ತಂದೊಡ್ಡಿದೆ. ಸದ್ಯ ಜೈಲಿನ ಜಾಮರ್ ಸಮಸ್ಯೆ ವಿರುದ್ಧ ವಕೀಲರ ಸಂಘ ಗಂಭೀರ ಹೋರಾಟಕ್ಕೆ ಮುಂದಾಗಿದ್ದು ಈ ಪ್ರಕರಣಯಾವ ಸ್ವರೂಪ ಪಡೆದುಕೊಳ್ಳುತ್ತೆ ಎಂಬುದನ್ನು ಕಾದು ನೋಡಬೇಕಿದೆ.

## ಚುನಾವಣೋತ್ತರ ಸಮೀಕ್ಷೆಯಲಿ ನಂಬಿಕೆ ಇಲ್ಲ – ಡಿಕೆಶಿ

ಒಂದನೇ ಪುಟದಿಂದ......

ಸೋಲುವ ಸಹಜ ಎಂದು ತಿಳಿಸಿದರು. ಬಿಹಾರ ಚುನಾವಣೆಯಿಂದ ರಾಜ್ಯ ರಾಜಕಾರಣದ ಮೇಲೆ ಯಾವ ಪರಿಣಾಮವನ್ನು ಬೀರುವುದಿಲ್ಲ. ಕರ್ನಾಟಕ ಅಭಿವೃದ್ಧಿ, ಸಾಮಾಜಿಕ ಬದಲಾವಣೆ ನಾಯಕ ಎಂದು ತಿಳಿಸಿದರು. ಡಿ.ಕೆ. ಶಿವಕುಮಾರ್ ಅವರು 2028ಕ್ಕೆ ಸಿಎಂ ಆಗಬೇಕು, ಅಲ್ಲಿಯವರೆಗೆ ಸಿದ್ದರಾಮಯ್ಯ ಅವರೇ ಸಿಎಂ. ಈ ಮಾತನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಮನೆ ಮುಂದೆ ನಿಂತು ಹೇಳುತ್ತೇನೆ ಎಂಬ ಸಚಿವ ಜಮೀರ್ ಅಹ್ಮದ್ ಅವರ ಹೇಳಿಕೆ ಬಗ್ಗೆ ಕೇಳಿದಾಗ, ಬಹಳ ಸಂತೋಷ. ಮುಖ್ಯಮಂತ್ರಿ ಇದ್ದಾರೆ, ಇರಲಿ. ಅದರಲ್ಲಿ ತಪ್ಪೇನಿದೆ. ನಮಗೆ ಯಾವುದೇ ಬೇಸರವಿಲ್ಲ. ನಾವು ಅವರ ಜೊತೆಯಲ್ಲಿ ಕೆಲಸ ಮಾಡುತ್ತಿದ್ದೇವೆ, ಒಟ್ಟಿಗೆ ಇದ್ದೇವೆ, ಮುಂದೆಯೂ ಒಟ್ಟಿಗೆ ಇರುತ್ತೇವೆ ಎಂದು ತಿಳಿಸಿದರು.

## ದೇಶದಲ್ಲಿ ಹಡಗು ನಿರ್ಮಾಣದ ಕ್ಲಸ್ಟರ್ ಅಭಿವೃದ್ಧಿ – ಸರ್ಬಾ ನಂದ ಸೋನಾವಾಲ್



ಮಂಗಳೂರು : ಭಾರತದಲ್ಲಿ ಹಡಗು ನಿರ್ಮಾಣಗಳ ಕ್ಲಸ್ಟರ್‌ಗಳನ್ನು ನಿರ್ಮಿಸುವ ಮೂಲಕ ಹಡಗು ನಿರ್ಮಾಣದಲ್ಲಿ ಸ್ವಾವಲಂಬನೆಯನ್ನು ಸಾಧಿಸುವ ಗುರಿ ಹೊಂದಿದೆ ಎಂದು ಕೇಂದ್ರ ಸರಕಾರದ ಬಂದರು ನೌಕಯಾನ ಹಾಗೂ ಜಲಸಾರಿಗೆ ಸಚಿವ ಸರ್ಬಾನಂದ ಸೋನಾವಾಲ್ ತಿಳಿಸಿದ್ದಾರೆ. ಅವರು ನವಮಂಗಳೂರು ಬಂದರು ಪ್ರಾಧಿಕಾರದ ಸುವರ್ಣ ಸಂಭ್ರಮ ಕಾರ್ಯಕ್ರಮಕ್ಕೆ ಆಗಮಿಸಿದ ಸಂದರ್ಭದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡುತ್ತಿದ್ದರು. ಚೈನಾ, ಕೊರಿಯಾ, ಜಪಾನ್‌ನಂತಹ ದೇಶಗಳು ಹಡಗು ತಯಾರಿಕೆಯಲ್ಲಿ ವಿಶ್ವದ ಅಗ್ರ ರಾಷ್ಟ್ರಗಳಾಗಿವೆ. ಮುಂದಿನ ದಿನಗಳಲ್ಲಿ ಭಾರತದ ಒರಿಸ್ಸಾ, ಗುಜರಾತ್, ತಮಿಳುನಾಡು ಹಡಗು ನಿರ್ಮಾಣದಲ್ಲಿ ಸ್ವಾಯತ್ತತೆಯನ್ನು ಸಾಧಿಸಲು ಕ್ಲಸ್ಟರ್‌ಗಳನ್ನು ಅಭಿವೃದ್ಧಿ ಪಡಿಸಲಾಗುವುದು ಎಂದು ಸಚಿವ ಸರ್ಬಾನಂದ ಸೋನಾವಾಲ್ ತಿಳಿಸಿದ್ದಾರೆ. ನವಮಂಗಳೂರು ಬಂದರನ್ನಾಗಿ ಅಭಿವೃದ್ಧಿ ಪಡಿಸಿ, ನೌಕಾ ಯಾನದ ಪ್ರವಾಸೋ ದ್ಯಮ, ಕೈಗಾರಿಕಾ ಪ್ರವಾಸೋದ್ಯಮ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗುವುದು. ಜೊತೆಗೆ ಆರ್ಥಿಕ ಸಂಪನ್ಮೂಲ ವೃದ್ಧಿಗೆ ಆಧ್ಯತೆ ನೀಡಲಾಗುವುದು. ಮಂಗಳೂರು ಬಂದರಿನಲ್ಲಿ ಸರಕು ನಿರ್ವಹಣೆಗೆ ಆಧುನಿಕ ಸೌಲಭ್ಯಗಳನ್ನು ಹೊಂದಿದೆ ಎಂದರು.

## ದೇವಸ್ಥಾನ ವ್ಯವಸ್ಥಾಪನಾ ಸಮಿತಿ ರಚಿಸಲು ಅರ್ಜಿ ಆಹ್ವಾನ

ಮಂಗಳೂರು–ದ.ಕ ಜಿಲ್ಲೆಯ ಪ್ರವರ್ಗ "ಸಿ" ವರ್ಗದ ಅಧಿಸೂಚಿತ ಸಂಸ್ಥೆಗಳಿಗೆ 9 ಜನ ಸದಸ್ಯರಿರುವ ವ್ಯವಸ್ಥಾಪನಾ ಸಮಿತಿಯನ್ನು ರಚಿಸುವ ಸಲುವಾಗಿ ಆಸಕ್ತ ಭಕ್ತಾಧಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಅಥವಾ ನಿಗಧಿತ ಅರ್ಜಿ ನಮೂನೆಗೆ ಧಾರ್ಮಿಕ ದತ್ತಿ ಇಲಾಖೆಯ ಸಹಾಯಕ ಆಯುಕ್ತರ ಕಚೇರಿ ಸಂಪರ್ಕಿಸಬಹುದು ಎಂದು ಹಿಂದೂ ಧಾರ್ಮಿಕ ಮತ್ತು ಧರ್ಮಾದಾಯ ದತ್ತಿಗಳ ಇಲಾಖೆ ಸಹಾಯಕ ಆಯುಕ್ತರು ತಿಳಿಸಿದ್ದಾರೆ.

## ಯಂಗ್ ಪ್ರೊಫೆಷನಲ್ ಹುದ್ದೆಗೆ ಸಂದರ್ಶನ

ಮಂಗಳೂರು – ನಗರದ ಹೊಯ್ಗೆ ಬಜಾರ್ ಬಜಾರ್‌ನಲ್ಲಿರುವ ಕೇಂದ್ರೀಯ ಸಮುದ್ರ ಮೀನುಗಾರಿಕೆ ಸಂಸ್ಥೆಯ (ICAR - CMFRI) ಮಂಗಳೂರು ಪ್ರಾದೇಶಿಕ ಕೇಂದ್ರದಲ್ಲಿ ಸಂಶೋಧನಾ ಯೋಜನೆಗಾಗಿ ಒಬ್ಬರು ಯುವ ವೃತ್ತಿಪರರ (Young Professional) ಆಯ್ಕೆಗಾಗಿ ನವೆಂಬರ್ 27ರಂದು ಬೆಳಿಗ್ಗೆ 10ಗಂಟೆಗೆ ನೇರ ಸಂದರ್ಶನ ನಡೆಯಲಿದೆ. ಹೆಚ್ಚಿನ ಮಾಹಿತಿಗೆ ಸಂಸ್ಥೆಯ ವೆಬ್‌ಸೈಟ್ www.cmfri.org.in ಗೆ ಭೇಟಿ ನೀಡಬಹುದು ಎಂದು ಐ.ಸಿ.ಎ.ಆರ್–ಸಿ.ಎಂ.ಎಫ್.ಆರ್.ಐ ಮುಖ್ಯಸ್ಥರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನವೆಂಬರ್ ತಿಂಗಳ ದಿ:20/11/2025ರಿಂದ 30ದಿನಗಳ ಕಾಲ ನಿರುದ್ಯೋಗಿ ಪುರುಷರಿಗೆ ದ್ವಿಚಕ್ರ ವಾಹನ ರಿಪೇರಿ ಮತ್ತು ಸರ್ವೀಸಿಂಗ್ ಉಚಿತ ತರಬೇತಿ ಶಿಬಿರವನ್ನು ಏರ್ಪಡಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯನ್ನು ಈ ಕೆಳಕಂಡ ದೂರವಾಣಿ ಸಂಖ್ಯೆ 8970476050/ 9591514154/ 9686248369ಗಳಿಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

## ಪರ್ಪಲ್ ಫೆಸ್ಟ್ ಕಾರ್ಯಕ್ರಮದ ರಾಯಭಾರಿಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ವತಿಯಿಂದ ಡಿ. 5ರಿಂದ 7ವರೆಗೆ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ನಡೆಯಲಿರುವ ರಾಷ್ಟ್ರ ಮಟ್ಟದ ಪರ್ಪಲ್ ಫೆಸ್ಟ್ ಕಾರ್ಯಕ್ರಮದ ರಾಯಭಾರಿ ಆಯ್ಕೆಗೆ ಜಿಲ್ಲೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದಿರುವ ವಿಕಲಚೇತನ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 08182–251676 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಷೇರುಧನ ಮಂಜೂರಾತಿಗೆ ಅರ್ಜಿ ಆಹ್ವಾನ

ಮಡಿಕೇರಿ : ಸಹಕಾರ ಸಂಘಗಳ ಉಪನಿಬಂಧಕರು, ಕೊಡಗು ಜಿಲ್ಲೆ, ಮಡಿಕೇರಿ ಇವರ ಕಚೇರಿಯಿಂದ 2025–26 ನೇ ಸಾಲಿನಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯತ್ ಕಾಯಕ್ರಮಗಳ ಅಡಿಯಲ್ಲಿ ವಿವಿಧ ಯೋಜನೆಗಳಲ್ಲಿ ಸಹಾಯಧನ/ಷೇರುಧನ ಮಂಜೂರಾತಿಗಾಗಿ ಅರ್ಹ ಸಹಕಾರ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನವೆಂಬರ್, 13ರಿಂದ ಪ್ರಾರಂಭವಾಗಲಿದೆ. ಡಿಸೆಂಬರ್, 02 ಕೊನೆಯ ದಿನವಾಗಿದ್ದು, ಆನ್‌ಲೈನ್ ಮುಖಾಂತರ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸಬಹುದು.

## ದ.ಕ.ಜಿಲ್ಲಾ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ಪುಷ್ಪರಾಜ್ ಬಿ. ಎನ್.



ಮಂಗಳೂರು: ದ.ಕ.ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ವಾರ್ತಾಭಾರತಿಯ ಮಂಗಳೂರು ಬ್ಯೂರೋ ಚೀಫ್ ಪುಷ್ಪರಾಜ್ ಬಿ.ಎನ್. ಆಯ್ಕೆಯಾಗಿದ್ದಾರೆ. ದ.ಕ.ಜಿಲ್ಲಾ ವಾರ್ತಾ ಇಲಾಖೆಯ ಸಭಾಂಗಣದಲ್ಲಿ ಬಾನುವಾರ ನಡೆದ ಚುನಾವಣೆಯಲ್ಲಿ 2025–28ನೆ ಸಾಲಿನ ಅಧ್ಯಕ್ಷರಾಗಿ ಆಯ್ಕೆಯಾದರು. ಪುಷ್ಪರಾಜ್ 187 ಮತಗಳನ್ನು ಗಳಿಸಿದರೆ ಅವರ ಪ್ರತಿಸ್ಪರ್ಧಿ ವಿಜಯವಾಣಿ ಪತ್ರಿಕೆಯ ವರದಿಗಾರ ಶ್ರವಣ್ ಕುಮಾರ್ ನಾಳ 144 ಮತಗಳನ್ನು ಪಡೆದರು. ಉಪಾಧ್ಯಕ್ಷರಾಗಿ ವಿಲ್‌ಫ್ರೆಡ್ ಡಿಸೋಜಾ, ಮುಹಮ್ಮದ್ ಆರೀಫ್, ರಾಜೇಶ್ ಶೆಟ್ಟಿ ಆಯ್ಕೆಯಾದರೆ, ಕಾರ್ಯದರ್ಶಿ ಸ್ಥಾನಕ್ಕೆ ಎ.ಸಿದ್ದಿಕ್ ನೀರಾಜೆ, ಸುರೇಶ್ ಡಿ ಪಳ್ಳಿ, ಸತೀಶ್ ಇರಾ ಆಯ್ಕೆಯಾದರು. ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಸ್ಥಾನಕ್ಕೆ ಹಾಲಿ ಅಧ್ಯಕ್ಷರಾಗಿದ್ದ ಶ್ರೀನಿವಾಸ ನಾಯಕ್.ಕೆ ಆಯ್ಕೆಯಾದರು. ಜಿಲ್ಲಾ ಕಾರ್ಯಕಾರಿಣಿ ಸಮಿತಿ ಸದಸ್ಯ ಸ್ಥಾನಕ್ಕೆ ಅಶೋಕ್ ಶೆಟ್ಟಿ ಬಿಎನ್, ಸಂದೇಶ್ ಜಾರ, ಸಂದೀಪ್ ಕುಮಾರ್.ಎಂ, ಲಕ್ಷ್ಮೀನಾರಾಯಣ ರಾವ್, ಹರೀಶ್ ಮೋಟುಕಾನ, ದಿವಾಕರ ಪದ್ಮುಂಜ, ಕಿರಣ್ ಯು ಸಿರ್ಸೀಕರ್, ಅಭಿಷೇಕ್ ಹೆಚ್.ಎಸ್, ಜಯಶ್ರೀ, ಭುವನೇಶ್ವರ ಜಿ, ಸಂದೀಪ್ ವಾಗ್ಲೆ, ಹರೀಶ್ ಕೆ. ಆದೂರ್, ಗಿರೀಶ್ ಅಡ್ಪಂಗಾಯ, ಸಂದೀಪ್ ಸಾಲ್ಯಾನ್ ಹಾಗೂ ಆರೀಫ್ ಕಲ್ಕಟ್ಟ ಆಯ್ಕೆಯಾಗಿದ್ದಾರೆ.

## ಶೀಘ್ರದಲ್ಲಿಯೇ ಮುಳಿಹಿತ್ಲು ರಸ್ತೆ ಅಗಲೀಕರಣ – ಶಾಸಕ ಕಾಮತ್



ಮಂಗಳೂರು: ಮ.ನ.ಪಾ. ವ್ಯಾಪ್ತಿಯ 58 ನೇ ಬೋಳಾರ ವಾರ್ಡಿನ ಮುಳಿಹಿತ್ಲುವಿನಲ್ಲಿ ಸುಮಾರು ಎರಡು ಕೋಟಿ ವೆಚ್ಚದಲ್ಲಿ ರಸ್ತೆ ಅಗಲೀಕರಣ ನಡೆಯಲಿದ್ದು ಶಾಸಕ ವೇದವ್ಯಾಸ ಕಾಮತ್‌ರವರು ಪಾಲಿಕೆ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದರು.ಈ ವೇಳೆ ಮಾತನಾಡಿದ ಶಾಸಕರು, ಇಲ್ಲಿನ ರಸ್ತೆ ಅಗಲೀಕರಣ ನಡೆಸುವ ಅವಶ್ಯಕತೆ ಬಗ್ಗೆ ಸ್ಥಳೀಯ ಪಾಲಿಕೆ ಸದಸ್ಯರು, ಸಾರ್ವಜನಿಕರು, ಹಲವು ಸಮಯದಿಂದ ಬೇಡಿಕೆಯಿಟ್ಟಿದ್ದರು. ಆ ನಿಟ್ಟಿನಲ್ಲಿ ವಿಶೇಷ ಮುತುವರ್ಜಿ ವಹಿಸಿ ಪಾಲಿಕೆಯ ಪ್ರೀಮಿಯಂ ಎಫ್.ಎ.ಆರ್ ಅನುದಾನವನ್ನು ಬಳಸಿಕೊಂಡು ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ. ಸಾರ್ವಜನಿಕರಿಗೆ ಯಾವುದೇ ರೀತಿಯಲ್ಲಿಯೂ ತೊಂದರೆಯಾಗದಂತೆ ಶೀಘ್ರದಲ್ಲಿ ಕಾಮಗಾರಿ ಮುಗಿಸುವಂತೆ ಸೂಚನೆ ನೀಡಿದ್ದೇನೆ ಎಂದರು.

## ಧರ್ಮಸ್ಥಳ ಲಕ್ಷದೀಪೋತ್ಸವ ವೈಭವ: ನ. 18 ಸರ್ವಧರ್ಮ ಸಮ್ಮೇಳನ



ಉಜಿರೆ: ನಾಡಿನ ಪವಿತ್ರ ಕ್ಷೇತ್ರ ಧರ್ಮಸ್ಥಳದಲ್ಲಿ ಕಾರ್ತಿಕ ಮಾಸದಲ್ಲಿ ನಡೆಯುವ ಲಕ್ಷದೀಪೋತ್ಸವ ಕಾರ್ಯಕ್ರಮಗಳು ನ. 15ರಿಂದ 19ರ ವರೆಗೆ ನಡೆಯಲಿವೆ. ನ. 18ರಂದು ಮಂಗಳವಾರ ಸಂಜೆ ಗಂಟೆ ಐದರಿಂದ ಸರ್ವಧರ್ಮ ಸಮ್ಮೇಳನದ 93ನೇ ಅಧಿವೇಶನ ನಡೆಯಲಿದೆ. ಕರ್ನಾಟಕ ಸರ್ಕಾರದ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಮೂಲ ಸೌಕರ್ಯಾಭಿವೃದ್ಧಿ ಇಲಾಖೆ ಸಚಿವ ಡಾ. ಬಿ.ಎಂ. ಪಾಟೀಲ್ ಸರ್ವಧರ್ಮ ಸಮ್ಮೇಳನದ 93ನೇ ಅಧೀವೇಶನವನ್ನು ಉದ್ಘಾಟಿಸಲಿದ್ದಾರೆ. ಹರಿಹರಪುರದ ಪೂಜ್ಯ ಶ್ರೀ ಸ್ವಯಂಪ್ರಕಾಶ್ ಸಚ್ಚಿದಾನಂದ ಸರಸ್ವತೀ ಸ್ವಾಮೀಜಿ ಅಧ್ಯಕ್ಷತೆ ವಹಿಸಲಿದ್ದಾರೆ. ಪ್ರಜಾವಾಣಿ ಪತ್ರಿಕೆಯ ಮುಖ್ಯ ಉಪಸಂಪಾದಕ ಎ.ಸೂರ್ಯಪ್ರಕಾಶ್ ಪಂಡಿತ್, ಖ್ಯಾತ ಅಂಕಣಕಾರ ತನ್ವೀರ್ ಅಹಮದ್ ಉಲ್ಲಾ ಉಪನ್ಯಾಸ ನೀಡಲಿದ್ದು, ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ರಾತ್ರಿ 8.30ರಿಂದ ಚೆನ್ನೈನ ಶ್ರೀದೇವಿ ನೃತ್ಯಾಲಯದ ಕಲಾವಿದರಿಂದ ವಿದುಷಿ ಡಾ. ಶೀಲಾ ಉನ್ನಿಕೃಷ್ಣನ್ ನಿರ್ದೇಶನದಲ್ಲಿ ಭರತನಾಟ್ಯ ನೃತ್ಯ ಪ್ರದರ್ಶನವಿದೆ.ರಾತ್ರಿ ಕಂಚಿಮಾರು ಕಟ್ಟೆ ಉತ್ಸವ ನಡೆಯಲಿದ್ದು, ನ.19ರಂದು ಸಂಜೆ 5 ಗಂಟೆಗೆ ಸಾಹಿತ್ಯ ಸಮ್ಮೇಳನದ 93ನೇ ಅಧೀವೇಶನವನ್ನು ಹಿರಿಯ ಸಾಹಿತಿ ಮತ್ತು ಅಂಕಣಕಾರ ಪ್ರೊ. ಪ್ರೇಮಶೇಖರ ಉದ್ಘಾಟಿಸುವರು. "ವಿಶ್ವವಾಣಿ" ಪತ್ರಿಕೆಯ ಮುಖ್ಯ ಸಂಪಾದಕ ವಿಶ್ವೇಶ್ವರ ಭಟ್ ಅಧ್ಯಕ್ಷತೆ ವಹಿಸುವರು.

## ರುಡ್‌ಸೆಟ್‌ನಲ್ಲಿ 'ಉಚಿತ ಕೋಳಿ ಸಾಕಾಣಿಕೆ' ತರಬೇತಿ




ಉಜಿರೆ : ನಿರುದ್ಯೋಗಿ ಯುವ–ಯುವತಿಯರಿಗೆ, ಉದ್ಯೋಗವನ್ನು ಅರಸುತ್ತಿರುವವರಿಗೆ ಹಾಗೂ ಸ್ವಉದ್ಯೋಗ ಆಕಾಂಕ್ಷಿಗಳಿಗೆ ಆಶಾಕಿರಣವಾಗಿರುವ ಮತ್ತು ಕೇಂದ್ರ ಸರಕಾರದಿಂದ ಸ್ವ ಉದ್ಯೋಗಕ್ಕಾಗಿ ಅನುಕರಣೀಯ ಮಾದರಿ ಎಂದು ಗುರುತಿಸಲ್ಪಟ್ಟು ದೇಶದ ಪ್ರತಿ ಜಿಲ್ಲೆಯಲ್ಲೂ ಬೇರೆ ಬೇರೆ ಬ್ಯಾಂಕುಗಳಿಂದ ರುಡ್ ಸೆಟ್ ಮಾದರಿ ಸಂಸ್ಥೆಗಳನ್ನು ಸ್ಥಾಪಿಸಿ ಇಂದು ಅನೇಕ ಯುವ ಜನರಿಗೆ ಸ್ವ ಉದ್ಯೋಗ / ಉದ್ಯೋಗಗಳನ್ನು ಕಲ್ಪಿಸಿದೆ. ಈಗ ಉಜಿರೆ ರುಡ್ ಸೆಟ್ ಸಂಸ್ಥೆಯಲ್ಲಿ 17.11.2025ರಿಂದ 29.11.2025ರವರೆಗೆ 13ದಿನದ ಉಚಿತ ತರಬೇತಿ ಊಟ–ವಸತಿಯೊಂದಿಗೆ ಕೃಷಿ ಉದ್ಯಮಿ–ಕೋಳಿ ಸಾಕಾಣಿಕೆ ತರಬೇತಿ ನಡೆಯಲಿದೆ. ಆಸಕ್ತಿರುವ ಕರ್ನಾಟಕ ರಾಜ್ಯದ 18 ರಿಂದ 50 ವರ್ಷಗಳ ವಯೋಮಿತಿಯ ಪುರುಷ ಮತ್ತು ಮಹಿಳೆಯರು ಅರ್ಜಿ ಸಲ್ಲಿಸಬಹುದು. ಅರ್ಜಿಯನ್ನು ಸಂಸ್ಥೆಯ ವೆಬ್‌ಸೈಟ್‌ನಲ್ಲಿ (www.rudsetujire.com) ನೇರವಾಗಿ ಅರ್ಜಿಯನ್ನು ಸಲ್ಲಿಸಬಹುದು ಅಥವಾ ಬಿಳಿ ಹಾಳೆಯಲ್ಲಿ ಬರೆದು ಅರ್ಜಿಯನ್ನು ನಿರ್ದೇಶಕರು, ರುಡ್ ಸೆಟ್ ಸಂಸ್ಥೆ, ಸಿದ್ಧವನ, ಉಜಿರೆ–574240, ಬೆಳ್ತಂಗಡಿ ದ.ಕ ಇವರಿಗೆ ಕಳುಹಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನ.16ಕ್ಕೆ ಕಟೀಲು ಏಳನೆಯ ಮೇಳದ ಪಾದಾರ್ಪಣೆ



ಮಂಗಳೂರು: ಕಟೀಲು ಶ್ರೀ ದುರ್ಗಾಪರಮೇಶ್ವರಿ ದೇವಳದ ಶ್ರೀ ದುರ್ಗಾಪರಮೇಶ್ವರಿ ಪ್ರಸಾದಿತ ದಶಾವತಾರ ಯಕ್ಷಗಾನ ಮಂಡಳಿಯ ಏಳನೆಯ ಮೇಳದ ಪಾದಾರ್ಪಣೆ ನವೆಂಬರ್ 16ರಂದು ನಡೆಯಲಿದೆ ಎಂದು ಕಟೀಲು ಕ್ಷೇತ್ರದ ಅನುವಂಶಿಕ ಅರ್ಚಕ ಶ್ರೀ ಹರಿನಾರಾಯಣದಾಸ ಆಸ್ರಣ್ಣ ತಿಳಿಸಿದ್ದಾರೆ. ನಗರದ ಪತ್ರಿಕಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನವೆಂಬರ್ 15ರಂದು ಮಧ್ಯಾಹ್ನ 3 ಗಂಟೆಗೆ ಬಜಪೆಯಿಂದ ಸ್ತಬ್ಧಚಿತ್ರಗಳಲ್ಲಿ ಸುಮಾರು ಒಂದು ಕೋಟಿ ರೂಪಾಯಿ ಮೌಲ್ಯದ, ಭಕ್ತರಿಂದ ಅರ್ಪಿತವಾದ ದೇವರ ಪರಿಕರಗಳು, ಕಿರೀಟಗಳು, ತೊಟ್ಟಿಲು, ಚಿನ್ನ–ಬೆಳ್ಳಿಯ ಆಯುಧಗಳನ್ನು ವೈಭವದ ಮೆರವಣಿಗೆಯಲ್ಲಿ ಕಟೀಲಿಗೆ ತರಲಾಗುವುದಾಗಿ ಹೇಳಿದರು. ಬಜಪೆಯಲ್ಲಿ ನಡೆಯುವ ಸಮಾರಂಭದಲ್ಲಿ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಮೆರವಣಿಗೆಯನ್ನು ಉದ್ಘಾಟಿಸಲಿದ್ದು, ಮಾನವ ಹಕ್ಕು ಆಯೋಗದ ಅಧ್ಯಕ್ಷ ಶ್ಯಾಂಭಟ್, ವಜ್ರದೇಹಿ ಮಠದ ಶ್ರೀ ರಾಜಶೇಖರಾನಂದ ಸ್ವಾಮೀಜಿ, ಶಾಸಕ ಉಮಾನಾಥ ಕೋಟ್ಯಾನ್, ಮಿಥುನ್ ರೈ ಹಾಗೂ ಹಲವು ಗಣ್ಯರು ಉಪಸ್ಥಿತರಿರಲಿದ್ದಾರೆ. ಮೆರವಣಿಗೆಯಲ್ಲಿ ಸುಮಾರು 15ರಿಂದ 20ಸಾವಿರ ಭಕ್ತರ ಭಾಗವಹಿಸುವ ನಿರೀಕ್ಷೆಯಿದೆ. ವೇದಘೋಷ, ಚೆಂಡೆ ತಂಡಗಳು, ವಾದ್ಯ, ಕೊಂಬು, ಹುಲಿವೇಷ, ಭಜನೆಗೋಷ್ಠಿ ಸೇರಿದಂತೆ ವೈಭವದ ಮೆರವಣಿಗೆಯು ಎಕ್ಕಾರಿನಿಂದ ಕಟೀಲುವರೆಗೆ ನಡೆಯಲಿದೆ ಎಂದರು.

## ಕಟೀಲು ದೇವಳಕ್ಕೆ ಬಂದರೆ ನನ್ನ ಮನೆಗೆ ಬಂದ ಅನುಭವ–ಅಬ್ದುಲ್ ನಜೀರ್



ಕಟೀಲು : ಕಟೀಲು ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನವು ಯಕ್ಷಗಾನ ಮತ್ತು ಶಿಕ್ಷಣ ಕ್ಷೇತ್ರಕ್ಕೆ ನೀಡುತ್ತಿರುವ ಕೊಡುಗೆ ಅನುಪಮವಾದುದು. 10ವರುಷಗಳವರೆಗೆ ಯಕ್ಷಗಾನ ಸೇವೆ ನೋಂದಣಿ ಆಗಿರುವುದು, ವಾರ್ಷಿಕ ಹತ್ತು ಕೋಟಿ ರುಪಾಯಿಗಳನ್ನು ಖರ್ಚು ಮಾಡುತ್ತಿರುವುದು ಅಭಿನಂದನೀಯ ಎಂದು ಸುಪ್ರಿಂಕೋರ್ಟ್ ನಿವೃತ್ತ ನ್ಯಾಯಾಧೀಶ, ಆಂಧ್ರಪ್ರದೇಶದ ರಾಜ್ಯಪಾಲ ಎಸ್. ಅಬ್ದುಲ್ ನಜೀರ್ ಹೇಳಿದರು. ಅವರು ಶನಿವಾರ ಕಟೀಲು ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದ ಸಮೂಹ ವಿದ್ಯಾಸಂಸ್ಥೆಗಳ ಸಂಯೋಜನೆಯಲ್ಲಿ ನಡೆದ ನುಡಿಹಬ್ಬದಲ್ಲಿ ಮಾತನಾಡಿದರು. ಕಟೀಲು ದೇವಸ್ಥಾನಕ್ಕೆ ಬಂದರೆ ನಮ್ಮ ಮನೆಗೆ ಬಂದ ಅನುಭವವಾಗುತ್ತದೆ.

## ಆರೆಸ್ಸೆಸ್ ಮುಖ್ಯಸ್ಥರ ಹೇಳಿಕೆ ಖಂಡನೀಯ: ಮಂಜುನಾಥ ಭಂಡಾರಿ



ಮಂಗಳೂರು: ಸಾವಿರಾರು ವರ್ಷಗಳ ಇತಿಹಾಸವುಳ್ಳ ಹಿಂದೂ ಧರ್ಮವನ್ನು, ನೂರು ವರ್ಷ ಕಳೆದಿರುವ ಆರೆಸ್ಸೆಸ್ ಜೊತೆ ತುಲನೆ ಮಾಡುವುದು ಖಂಡನೀಯ. ಇದೀಗ ದೇಶದಾದ್ಯಂತ ಚರ್ಚೆಯ ವಿಷಯವಾಗಿರುವ "ಆರೆಸ್ಸೆಸ್ ಏಕೆ ನೋಂದಣಿ ಆಗಿಲ್ಲ" ಎಂಬ ಪ್ರಶ್ನೆಗೆ ಆರೆಸ್ಸೆಸ್ ಮುಖ್ಯಸ್ಥ ಮೋಹನ್ ಭಾಗವತ್ "ಹಿಂದೂ ಧರ್ಮವೂ ನೋಂದಣಿ ಆಗಿಲ್ಲ" ಎಂದು ನೀಡಿರುವ ಹೇಳಿಕೆ ಖಂಡನೀಯ ಮತ್ತು ಅದು ನಾವೆಲ್ಲರೂ ಪ್ರತಿನಿಧಿಸುವ ಹಿಂದೂ ಧರ್ಮಕ್ಕೆ ಮಾಡುವ ಘೋರ ಅಪಮಾನವಾಗಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷರು ಮತ್ತು ವಿಧಾನಪರಿಷತ್ ಶಾಸಕರು ಆಗಿರುವ ಮಂಜುನಾಥ ಭಂಡಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈ ಹೇಳಿಕೆಯಿಂದ ಭಾಗವತ್ ಅವರು, ವಿವಿಧತೆಯಲ್ಲಿ ಏಕತೆಯನ್ನೇ ಮೂಲಮಂತ್ರ ವನ್ನಾಗಿಸಿಕೊಂಡಿರುವ ಹಿಂದೂ ಧರ್ಮವನ್ನು ಒಂದು ನೋಂದಾಯಿತ ಅಲ್ಲದ "ಸಂಸ್ಥೆ" ಅಥವಾ "ಸಂಘಟನೆ"ಗೆ ಹೋಲಿಕೆ ಮಾಡುವ ಮೂಲಕ ಅವಮಾನಿಸಿದ್ದಾರೆ. ಹಿಂದೂಧರ್ಮವು ಲಕ್ಷಾಂತರ ವರ್ಷಗಳಿಂದ ಈ ನೆಲದ ಮೂಲನಿವಾಸಿಗಳ ಜೀವನಶೈಲಿಯ, ಸಂಸ್ಕೃತಿಯ, ನಂಬಿಕೆಗಳ ಸಮಗ್ರ ರೂಪವಾಗಿದೆ. ನೂರಾರು ಪೀಳಿಗೆಗಳ ಅನುಭವ, ತತ್ವ, ಆಚರಣೆಗಳಿಂದ ಬೆಳೆದ ಈ ಧರ್ಮವು ಯಾರೊಬ್ಬರ "ನೋಂದಣಿಯ" ಅಗತ್ಯವಿಲ್ಲದೆ ಶಾಶ್ವತವಾಗಿ ನೆಲೆಯೂರಿದೆ ಎಂದವರು ಹೇಳಿದ್ದಾರೆ.

## ಕಾಂಕ್ರೀಟೀಕರಣಗೊಂಡ ಸಂಪರ್ಕ ರಸ್ತೆ ಉದ್ಘಾಟಿಸಿದ ಶಾಸಕ ಕಾಮತ್



ಮಂಗಳೂರು : ಮಂಗಳೂರು ಮಹಾನಗರ ಪಾಲಿಕೆಯ ಪಿ.ವಿ.ಎಸ್ ವೃತ್ತದಿಂದ ಲಕ್ಷ್ಮೀ ನಗರ ವಸತಿ ಸಂಕೀರ್ಣ ಸಂಪರ್ಕ ರಸ್ತೆಯು ರೂ 5.ಲಕ್ಷ ವೆಚ್ಚದಲ್ಲಿ ಕಾಂಕ್ರೀಟೀಕರಣಗೊಂಡಿದ್ದು, ರಸ್ತೆಯನ್ನು ಶಾಸಕ ವೇದವ್ಯಾಸ ಕಾಮತ್‌ರವರು ಉದ್ಘಾಟನೆಗೊಳಿಸಿದರು. ನಂತರ ಮಾತನಾಡಿದ ಶಾಸಕರು, ಸ್ಥಳೀಯ ನಿಕಟಪೂರ್ವ ಪಾಲಿಕೆ ಸದಸ್ಯೆ ಶ್ರೀಮತಿ ಲೀಲಾವತಿ ಪ್ರಕಾಶ್‌ರವರ ವಿಶೇಷ ಮುತುವರ್ಜಿ ವಹಿಸಿದ್ದರ ಪರಿಣಾಮ ಈ ರಸ್ತೆಯು ಕಾಂಕ್ರೀಟೀಕರಣಗೊಂಡಿದ್ದು ವಿಶೇಷವಾಗಿ ಲಕ್ಷ್ಮೀನಗರದ ಅಪಾರ್ಟ್‌ಮೆಂಟ್ ನಿವಾಸಿಗಳಿಗೆ ಅನುಕೂಲವಾಗಿರುವುದು ಸಂತಸದ ಸಂಗತಿ ಎಂದರು. ಇದೇ ಸಂದರ್ಭದಲ್ಲಿ ದ.ಕ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಶ್ರೀ ಪುಷ್ಪರಾಜ್ ಬಿ.ಎನ್, ರಾಜ್ಯ ಕಾರ್ಯಕಾರಿಣಿ ಸದಸ್ಯ ಶ್ರೀನಿವಾಸ್ ನಾಯಕ್ ಇಂದಾಜೆ, ಕಾರ್ಯದರ್ಶಿ ಸತೀಶ್ ಇರಾ ರವರನ್ನು ಶಾಸಕರು ಸನ್ಮಾನಿಸಿದರು.

## ಉಜಿರೆಯ ಎಸ್.ಡಿ.ಎಂ. ನೇತೃತ್ವದಲ್ಲಿ ಮಂಗಳೂರು ವಿ.ವಿ. ತಂಡ ಆಯ್ಕೆ



ಉಜಿರೆ: ಹರಿಯಾಣದಲ್ಲಿ ಕುರುಕ್ಷೇತ್ರ ವಿಶ್ವವಿದ್ಯಾಲಯದಲ್ಲಿ ನ.11ರಿಂದ 12ರ ವರೆಗೆ ರಾಷ್ಟ್ರೀಯ ಸೇವಾ ಯೋಜನೆ ಆಯೋಜಿಸುತ್ತಿರುವ ರಾಷ್ಟ್ರೀಯ ಭಾವೈಕ್ಯತಾ ಶಿಬಿರದಲ್ಲಿ ಕರ್ನಾಟಕವನ್ನು ಪ್ರತಿನಿಧಿಸಲು ಮಂಗಳೂರು ವಿ.ವಿ. ಯಿಂದ ಉಜಿರೆಯ ಎಸ್.ಡಿ.ಎಂ. ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾಧಿಕಾರಿ ಡಾ. ಮಹೇಶ್‌ಕುಮಾರ್ ಶೆಟ್ಟಿ ನೇತೃತ್ವದಲ್ಲಿ ಎಂಟು ಮಂದಿ ರಾಷ್ಟ್ರೀಯ ಸೇವಾ ಯೋಜನಾ ಸ್ವಯಂ ಸೇವಕರು ಆಯ್ಕೆಯಾಗಿದ್ದು ಈಗಾಗಲೆ ಹರಿಯಾಣ ತಲುಪಿದ್ದಾರೆ. ನೆವಿಲ್ ನವೀನ್ ಮೊರಾಸ್ (ಎಸ್.ಡಿ.ಎಂ.ಕಾಲೇಜು, ಉಜಿರೆ), ಯುವರಾಜ್ (ಕೆನರಾ ಕಾಲೇಜು, ಮಂಗಳೂರು), ಪಲ್ಲವಿ (ಗೋವಿಂದದಾಸ್ ಕಾಲೇಜು, ಸುರತ್ಕಲ್), ಶರಣ್ಯಾ ಶೆಟ್ಟಿ (ಬಿ.ಬಿ ಹೆಗ್ಡೆ ಕಾಲೇಜು, ಕುಂದಾಪುರ), ದೇವಿಕಾ (ಶ್ರೀ ಸುಬ್ರಹ್ಮಣ್ಯೇಶ್ವರ ಕಾಲೇಜು, ಸುಬ್ರಹ್ಮಣ್ಯ), ದೀಪ್ತಿ (ವಿಜಯಾ ಕಾಲೇಜು, ಮುಲ್ಕಿ), ಬಿರಾದಾರ್ (ಸರ್ಕಾರಿ ಕಾಲೇಜು, ತೆಂಕನಿಡಿಯೂರು, ಉಡುಪಿ) ಮತ್ತು ಗಣೇಶ್ (ಶ್ರೀ ಭುವನೇಂದ್ರ ಕಾಲೇಜು, ಕಾರ್ಕಳ) ಆಯ್ಕೆಯಾದ ಸ್ವಯಂ ಸೇವಕರು. ಮಂಗಳೂರು ವಿ.ವಿ. ರಾಷ್ಟ್ರೀಯ ಸೇವಾ ಯೋಜನಾ ಸಂಯೋಜನಾಧಿಕಾರಿಗಳಾದ ಡಾ. ಶೇಷಪ್ಪ ಕೆ. ಮತ್ತು ಎಸ್.ಡಿ.ಎಂ. ಕಾಲೇಜಿನ ಪ್ರಾಂಶುಪಾಲ ಪ್ರೊ. ಪಿ. ವಿಶ್ವನಾಥ್ ತಂಡವನ್ನು ಅಭಿನಂದಿಸಿ ಶುಭ ಹಾರೈಸಿದ್ದಾರೆ.

## ರಾಷ್ಟ್ರೀಯ ಕಬಡ್ಡಿ ತಂಡಕ್ಕೆ ದಕ್ಷಿಣ ಭಾರತದ ಏಕೈಕ ಆಟಗಾರ್ತಿ !



ಮೂಡುಬಿದಿರೆ: ಆಳ್ವಾಸ್ ಸ್ಪೋರ್ಟ್ಸ್ ಕ್ಲಬ್‌ನ ಪ್ರತಿಭಾನ್ವಿತ ಕಬಡ್ಡಿ ಆಟಗಾರ್ತಿ ಧನಲಕ್ಷ್ಮೀ ಪೂಜಾರಿ, ಭಾರತದ ರಾಷ್ಟ್ರೀಯ ಕಬ್ಬಡ್ಡಿ ತಂಡಕ್ಕೆ ಆಯ್ಕೆಯಾಗಿದ್ದಾರೆ. ಇವರು ನವೆಂಬರ 15 ರಿಂದ 25ರವರೆಗೆ ಬಾಂಗ್ಲಾದೇಶದ ಡಾಕಾದಲ್ಲಿ ನಡೆಯಲಿರುವ ಎರಡನೇ ಮಹಿಳಾ ಕಬಡ್ಡಿ ವಲ್ಡ್‌ಕಪ್‌ನಲ್ಲಿ ಭಾರತ ತಂಡವನ್ನು ಪ್ರತಿನಿಧಿಸಲಿದ್ದಾರೆ. ಧನಲಕ್ಷ್ಮೀ, ದಕ್ಷಿಣ ಭಾರತದಿಂದ ರಾಷ್ಟ್ರೀಯ ತಂಡಕ್ಕೆ ಆಯ್ಕೆಯಾದ ಏಕೈಕ ಆಟಗಾರ್ತಿಯಾಗಿದ್ದಾರೆ. ತನ್ನ ಆಲ್‌ರೌಂಡರ್ ಆಟದಿಂದ ತಂಡದಲ್ಲಿ ಬಹುಬೇಡಿಕೆಯ ಕ್ರೀಡಾಪಟುವಾಗಿದ್ದಾರೆ. ಧನಲಕ್ಷ್ಮೀ ಆಳ್ವಾಸ್ ಶಿಕ್ಷಣ ಪ್ರತಿಷ್ಠಾನದಲ್ಲಿ ಪದವಿಪೂರ್ವ, ಪದವಿ ಹಾಗೂ ಸ್ನಾತಕೋತ್ತರ ಪದವಿಯೊಂದಿಗೆ ಡಿಪ್ಲೋಮಾ ಕೋರ್ಸ್‌ಗಳನ್ನು ಸಂಪೂರ್ಣ ಕ್ರೀಡಾ ದತ್ತು ಶಿಕ್ಷಣ ಯೋಜನೆಯಲ್ಲಿ ಉಚಿತವಾಗಿ ಪಡೆದಿದ್ದಾರೆ. ಇವರು ಜೂನಿಯರ್ ನ್ಯಾಷನಲ್, ಸೀನಿಯರ್ ನ್ಯಾಷನಲ್ ಹಾಗೂ ಫೆಡರೇಷನ್ ಕಪ್‌ನಲ್ಲಿ ಒಟ್ಟು 12 ಬಾರಿ ಕರ್ನಾಟಕ ತಂಡವನ್ನು ಪ್ರತಿನಿಧಿಸಿದ್ದರು. ಈಗಾಗಲೇ ಸೀನಿಯರ್ ಹಾಗೂ ಜೂನಿಯರ್ ವಿಭಾಗದಲ್ಲಿ 4 ಬಾರಿ ರಾಷ್ಟ್ರೀಯ ತರಬೇತಿ ಶಿಬಿರದಲ್ಲಿ ಭಾಗವಹಿಸಿರುತ್ತಾರೆ. ಪ್ರಸ್ತುತ ಗುಜರಾತಿನ ಗಾಂಧಿನಗರದಲ್ಲಿರುವ ಸಾಯ್ ಸೆಂಟರ್‌ನಲ್ಲಿ ಅಂತಿಮ ತರಬೇತಿ ಶಿಬಿರದಲ್ಲಿ ಪಾಲ್ಗೊಂಡಿದ್ದಾರೆ. ಕರ್ನಾಟಕ ರಾಜ್ಯ ಅಮೆಚೂರ್ ಕಬಡ್ಡಿ ಅಸೋಸಿಯೇಷನ್ ಹಾಗೂ ದಕ್ಷಿಣಕನ್ನಡ ಜಿಲ್ಲಾ ಅಮೆಚೂರ್ ಕಬಡ್ಡಿ ಅಸೋಸಿಯೇಷನ್‌ನ ಸಹಕಾರ ಸ್ಮರಿಸಲಾಗಿದೆ.

## ಪ್ರಯಾಣಿಕರ ಸುರಕ್ಷತೆಗೆ ಆದ್ಯತೆ ನೀಡಲು ಉಡುಪಿ ಡಿ.ಸಿ. ಆದೇಶ



ಉಡುಪಿ : ಖಾಸಗಿ ಬಸ್‌ಗಳು ಪ್ರಯಾಣಿಕರ ಸುರಕ್ಷತೆಗೆ ಆದ್ಯತೆ ನೀಡಬೇಕು. ಆ ನಿಟ್ಟಿನಲ್ಲಿ ಬಾಗಿಲುಗಳನ್ನು ಅಳವಡಿಸಿ ಕಡ್ಡಾಯವಾಗಿ ಬಾಗಿಲು ಹಾಕಬೇಕು. ಹಿರಿಯನಾಗರಿಕರು, ಅಂಗವಿಕಲರು ಹಾಗೂ ಮಹಿಳೆಯರ ಸೀಟುಗಳಲ್ಲಿ ಬೇರೆಯವರಿಗೆ ಅವಕಾಶ ನೀಡದೆ ನಿಯಮ ಪಾಲಿಸಬೇಕು ಎಂದು ಉಡುಪಿ ಜಿಲ್ಲಾಧಿಕಾರಿ ಸ್ವರೂಪ ಟಿ.ಕೆ. ಹೇಳಿದ್ದಾರೆ. ಖಾಸಗಿ ಬಸ್‌ಗಳಲ್ಲಿ ಡೋರ್ ಇಲ್ಲ. ಇದ್ದರೂ ಕೆಲವು ಬಸ್‌ಗಳಲ್ಲಿ ಡೋರ್ ಹಾಕುವುದಿಲ್ಲ ಎಂದು ಸಾರ್ವಜನಿಕರು ಸಭೆಯಲ್ಲಿ ದೂರಿದರು. ಪಡುಕೋಣೆ ಮಾರ್ಗದಲ್ಲಿ ಮಧ್ಯಾಹ್ನ ವೇಳೆ ಬಸ್ ಇಲ್ಲ. ಇದರಿಂದ ಒಂದೂವರೆ ಕಿ.ಮೀ. ದೂರ ನಡೆದುಕೊಂಡು ಹೋಗಬೇಕಾಗುತ್ತದೆ. ಪ್ರತಿದಿನ ರಿಕ್ಷಾಕ್ಕೆ ಹಣ ನೀಡಲು ನಮ್ಮಿಂದ ಅಸಾಧ್ಯ. ಆದುದರಿಂದ ಈ ಮಾರ್ಗದಲ್ಲಿ ಸರಕಾರಿ ಬಸ್ ಆರಂಭಿಸಬೇಕೆಂದು ವಿದ್ಯಾರ್ಥಿನಿಯೊಬ್ಬಳು ಮನವಿ ಮಾಡಿದರು. ಪ್ರಮುಖ ಧಾರ್ಮಿಕ ಕೇಂದ್ರವಾಗಿರುವ ಕೊಲ್ಲೂರಿಗೆ ಯಾವುದೇ ಸರಕಾರಿ ಬಸ್ ವ್ಯವಸ್ಥೆ ಇಲ್ಲ ಎಂದು ಸಾರ್ವಜನಿಕರು ದೂರಿದರು. ಈಗ ಇರುವ ಕೊಲ್ಲೂರು– ಬೆಂಗಳೂರು ಮಾರ್ಗದಲ್ಲಿ ಓಡಾಡುತ್ತಿರುವ ರಾಜಹಂಸ ಬಸ್ ಬದಲು ಕೆಎಸ್‌ಆರ್‌ಟಿಸಿ ಬಸ್ ವ್ಯವಸ್ಥೆ ಮಾಡಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

# ಸುದ್ದಿ ತುಣುಕು

ಕಾರ್ಮಿಕ ಕಾಯ್ದೆಯಡಿ ನೋಂದಣಿಯಾಗಿರುವ ಸರ್ಕಾರಿ, ಖಾಸಗಿ ಕಂಪೆನಿಗಳ ಎಲ್ಲ ಮಹಿಳಾ ಉದ್ಯೋಗಿಗಳಿಗೆ ಋತುಚಕ್ರ ಸಮಯದಲ್ಲಿ ಮಾಸಿಕ ವೇತನಸಹಿತ 1 ರಜೆ ನೀಡುವಂತೆ ಕಾರ್ಮಿಕ ಇಲಾಖೆ ಆದೇಶಿಸಿದೆ.

ಹುಲಿ ದಾಳಿಯಿಂದಾಗುತ್ತಿರುವ ಪ್ರಾಣ ಹಾನಿ ಹಾಗೂ ಇತರ ಹಾನಿಗಳನ್ನು ತಡೆಯುವ ನಿಟ್ಟಿನಲ್ಲಿ ಬಂಡೀಪುರ ಹಾಗೂ ನಾಗರಹೊಳೆಯ ವ್ಯಾಪ್ತಿಯ ವನ್ಯಜೀವಿ ಸಫಾರಿಯನ್ನು ರಾಜ್ಯ ಸರ್ಕಾರ ಬಂದ್ ಮಾಡಿದೆ.

ಕಬ್ಬು ಬೆಳೆಗಾರರ ಸಮಸ್ಯೆಗಳ ಬಗ್ಗೆ ಕೇಂದ್ರ ಸರ್ಕಾರದ ಮೇಲೆ ಗೂಬೆ ಕೂರಿಸುವುದು ಸರಿಯಲ್ಲ. ಕೇಂದ್ರವು ಬೆಲೆ ಸ್ಥಿರತೆ ಮತ್ತು ಮಾರುಕಟ್ಟೆ ವೈವಿಧ್ಯತೆ ಎರಡನ್ನೂ ಉತ್ತಮವಾಗಿಸಿದೆ ಎಂದು ಸಿಎಂಗೆ ಕೇಂದ್ರ ಸಚಿವ ಜೋಶಿ ಪತ್ರ ಬರೆದಿದ್ದಾರೆ.

ಕಷ್ಟ ಭಂಜನ (ಕಷ್ಟನಾಶಕ) ಭೈರವ ದೇವರಿಗೆ 2025ನೇ ವರ್ಷದ ಪ್ರಕಾರದ ಮಿಷ್ಠಾನ ನೈವೇದ್ಯ ಸಮರ್ಪಣೆಯು ವಿಶ್ವ ದಾಖಲೆಯ ಪುಟ ಸೇರಿತು.

ನ್ಯಾಕುನ್ನಾ ವರದಿ ರದ್ದುಪಡಿಸಬೇಕು ಎಂದು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಡಿ ಕೆ ಸಿಂಗ್ ಮತ್ತು ತಾರಾ ವಿತಾಸ್ತಾ ಗಂಜು ಅವರ ವಿಭಾಗೀಯ ಪೀಠ, ವಿಚಾರಣೆ ಪೂರ್ಣಗೊಳಿಸಿ ಆದೇಶವನ್ನು ಕಾಯ್ದಿರಿಸಿದೆ.

ಮುಖ್ಯಮಂತ್ರಿಗಳು ಬುಡಕಟ್ಟು ಜನರ ಮನೆ ಕಟ್ಟಲು 1 ಮನೆಗೆ 4 ಲಕ್ಷದ 50 ಸಾವಿರ ನಿಗದಿ ಮಾಡಿದ್ದಾರೆ ಎಂದು ಕರ್ನಾಟಕ ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕ ಟಿ. ಯೋಗೀಶ್ ಹೇಳಿದ್ದಾರೆ.

ವಿಶ್ವದ ಅತಿ ಉದ್ದದ ರೈಲು ನಿಲ್ದಾಣ ಎಂಬ ಹೆಗ್ಗಳಿಕೆ ಪಡೆದಿರುವ ಇಲ್ಲಿನ ಶ್ರೀ ಸಿದ್ಧಾರೂಢ ಸ್ವಾಮೀಜಿ ರೈಲು ನಿಲ್ದಾಣವು ಈಗಾಗಲೇ ಗಿನ್ನೆಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಲ್ಲಿ ತನ್ನ ಹೆಸರನ್ನು ನೋಂದಾಯಿಸಿದೆ.

ತುಂಗಭದ್ರಾ ಜಲಾಶಯದ ವ್ಯಾಪ್ತಿಯ ಬಳ್ಳಾರಿ, ರಾಯಚೂರು, ಕೊಪ್ಪಳ, ವಿಜಯನಗರ ಜಿಲ್ಲೆಗಳ ರೈತರು ಬೇಸಿಗೆ ಬೆಳೆ ಬೆಳೆಯಲು ಅನುಕೂಲವಾಗುವಂತೆ ನೀರು ಹಾಯಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರುಸೇನೆ ಸಂಘಟನೆ ಸಹಯೋಗದಲ್ಲಿ ಸಿರುಗುಪ್ಪ ತಾಲೂಕಿನ ಕರೂರಿನಿಂದ ಟಿ.ಬಿ. ಡ್ಯಾಂವರೆಗೆ ಪಾದಯಾತ್ರೆ ಪ್ರಾರಂಭಿಸಿದರು.

ಎನ್‌ಒಸಿಗಳನ್ನು ನೀಡದ ಕಾರಣ, ಸಾವಿರಾರು ವಾಹನಗಳನ್ನು ಮಾರಾಟ ಮಾಡಿ ಹೊಸ ಮಾಲೀಕರ ಕೈಸೇರಿ ಅವರು ಓಡಿಸುತ್ತಿದ್ದರೂ, ಅವು ಮೂಲ ಮಾಲೀಕರ ಹೆಸರಿನಲ್ಲಿಯೇ ಇವೆ ಎಂದು ವರದಿಯಾಗಿದೆ.

ನಾಲ್ಕು ದಿನಗಳ ಕಾಲ "ಸಮೃದ್ಧ ಕೃಷಿ – ವಿಕಸಿತ ಭಾರತ" (ನೆಲ, ಜಲ ಮತ್ತು ಬೆಳೆ)" ಎಂಬ ಘೋಷವಾಕ್ಯದೊಂದಿಗೆ ಜಿಕೆವಿಕೆ ಆವರಣದಲ್ಲಿ ಕೃಷಿ ಮೇಳ ನಡೆಯಲಿದೆ.

ನಕ್ಸಲ್ ಚಳವಳಿಯಲ್ಲಿದ್ದು, ಬಳಿಕ ಸಮಾಜದ ಮುಖ್ಯವಾಹಿನಿಗೆ ಬಂದಿದ್ದ ಮಹಿಳೆಯೊಬ್ಬರಿಗೆ ರಾಜ್ಯ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ.

ಕುರುಬರ ಸಂಘ ಮತ್ತು ಕುರುಬ ಸಮಾಜದ ಪೀಠವನ್ನು ಉಳಿಸಿದ್ದು ನಾನು. ರಾಜ್ಯ ಸುತ್ತಿ ಸಮಾಜದ ಸಂಘಟಿಸಿದ್ದು ನಾನು, ಮುಕುಡಪ್ಪ, ಮಾಸ್ತಿ ಮತ್ತು ಇತರರು ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಧರ್ಮಸ್ಥಳದಲ್ಲಿ ನೂರಾರು ಮೃತದೇಹಗಳನ್ನು ಹೂತಿಟ್ಟಿದ್ದಾರೆ ಎನ್ನಲಾದ ಪ್ರಕರಣದ ಬಗ್ಗೆ ವಿಶೇಷ ತನಿಖಾ ತಂಡ (ಎಸ್‌ಐಟಿ) ನಡೆಸುತ್ತಿದ್ದ ತನಿಖೆಗೆ ನೀಡಿದ್ದ ಮಧ್ಯಂತರ ತಡೆಯಾಜ್ಞೆಯನ್ನು ಹೈಕೋರ್ಟ್ ತೆರವುಗೊಳಿಸಿದೆ.

ಬಿಹಾರ ವಿಧಾನಸಭಾ ಚುನಾವಣೆ-2025ಕ್ಕೆ ನಡೆದ ಮತದಾನ ಮುಗಿದಿದೆ. ಇನ್ನೇನಿದ್ದರೂ ಫಲಿತಾಂಶದತ್ತ ಎಲ್ಲ ಗಮನವಿದೆ. ಈ ಬಾರಿ ರಾಜ್ಯದಲ್ಲಿ 2.47 ಕೋಟಿ ಪುರುಷ ಮತದಾರರಿಗೆ ಹೋಲಿಸಿದರೆ, ಕನಿಷ್ಠ 2.52 ಕೋಟಿ ಮಹಿಳೆಯರು ಮತ ಚಲಾಯಿಸಿದ್ದಾರೆ.

## ಬಾದುಷ



**ಬೇಕಾಗುವ ಪದಾರ್ಥಗಳು :**

3 ಕಪ್ ಮೈದಾ ಹಿಟ್ಟು
5 ಚಮಚ ತುಪ್ಪ
1 ಕಪ್ ಸಕ್ಕರೆ
ಚಿಟಿಕೆ ಏಲಕ್ಕಿ ಪುಡಿ
ಉಪ್ಪು ರುಚಿಗೆ ತಕ್ಕಷ್ಟು
ಕರಿಯಲು ಎಣ್ಣೆ

**ಮಾಡುವ ವಿಧಾನ :**

ಒಂದು ಪಾತ್ರೆಯಲ್ಲಿ ಮೈದಾ ಹಿಟ್ಟು, ಉಪ್ಪು ಮತ್ತು ತುಪ್ಪ ಹಾಕಿ ಕಲಸಿ. ಸ್ವಲ್ಪ ಸ್ವಲ್ಪವೇ ನೀರು ಹಾಕುತ್ತಾ ಮೃದುವಾದ ಚಪಾತಿ ಹಿಟ್ಟಿನ ಹದಕ್ಕೆ ಕಲಸಬೇಕು ಹಾಗೆ ನಿಂಬೆ ಹಣ್ಣಿನ ಗಾತ್ರದ ಉಂಡೆ ಮಾಡಿ ಸ್ವಲ್ಪ ಚಪ್ಪಟೆಯಾಕಾರ ಮಾಡಿ ಇಟ್ಟುಕೊಳ್ಳಬೇಕು. 1 ಕಪ್ ಸಕ್ಕರೆಗೆ 1/2 ಕಪ್ ನೀರುಹಾಕಿ, ಏಲಕ್ಕಿ ಪುಡಿ ಸೇರಿಸಿ ಒಂದೆಳೆ ಪಾಕ ಮಾಡಿಕೊಳ್ಳಬೇಕು. ಒಂದು ಬಾಣಲೆಯಲ್ಲಿ ಎಣ್ಣೆ ಬಿಸಿ ಮಾಡಿ. ನಂತರ ಚಪ್ಪಟೆಯಾಕಾರದ ಉಂಡೆಯನ್ನು ಬಿಸಿಯಾದ ಎಣ್ಣೆಯಲ್ಲಿ ಹಾಕಿ ಮಧ್ಯಮ ಉರಿಯಲ್ಲಿ ಕಾಯಿಸಿ. ಬಿಸಿಯಾದ ಸಕ್ಕರೆ ಪಾಕದಲ್ಲಿ ಅದ್ದಿ ತೆಗೆದರೆ ರುಚಿಯಾದ ಬಾದುಷ ಸವಿಯಲು ಸಿದ್ಧ.

## ಅಮೆರಿಕ ಈಗ ಶ್ರೀಮಂತ ದೇಶ: ಟ್ರಂಪ್



ವಾಷಿಂಗ್ಟನ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಮ್ಮ ಸುಂಕ ನೀತಿಯನ್ನು ಸಮರ್ಥಿಸಿಕೊಂಡಿದ್ದು, "ಮೂರ್ಖ ನಿಲುವು" ಎಂಬ ಟೀಕಾಕಾರರ ಹೇಳಿಕೆಯನ್ನು ತಳ್ಳಿಹಾಕಿದ್ದಾರೆ. ಅಲ್ಲದೇ ತಮ್ಮ ನಾಯಕತ್ವದಲ್ಲಿ ಅಮೆರಿಕವು "ವಿಶ್ವದ ಅತ್ಯಂತ ಶ್ರೀಮಂತ ಮತ್ತು ಅತ್ಯಂತ ಗೌರವಾನ್ವಿತ ದೇಶ"ವಾಗಿದೆ ಎಂದು ಪ್ರತಿಪಾದಿಸಿದರು. "ಸುಂಕಗಳನ್ನು ವಿರೋಧಿಸುವ ಜನರು ಮೂರ್ಖರು!" ಎಂದು ಕರೆದಿರುವ ಟ್ರಂಪ್, "ವಿಶ್ವದ ಅತ್ಯಂತ ಶ್ರೀಮಂತ, ಅತ್ಯಂತ ಗೌರವಾನ್ವಿತ ದೇಶ, ಬಹುತೇಕ ಹಣದುಬ್ಬರವಿಲ್ಲ ಮತ್ತು ದಾಖಲೆಯ ಷೇರು ಮಾರುಕಟ್ಟೆಯನ್ನು ಹೊಂದಿದೆ" ಎಂದು ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ.

## ಜಿ20 ಶೃಂಗಸಭೆಯನ್ನು ಬಹಿಷ್ಕರಿಸೋದು 'ಸಾಮ್ರಾಜ್ಯಶಾಹಿ'

ದಕ್ಷಿಣ ಆಫ್ರಿಕಾ : ಜೋಹಾನ್ಸ್‌ಬರ್ಗ್‌ನಲ್ಲಿ ನಡೆಯಲಿರುವ ಜಿ 20 ಶೃಂಗಸಭೆಯನ್ನು ಬಹಿಷ್ಕರಿಸುವ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಿರ್ಧಾರಕ್ಕೆ ದಕ್ಷಿಣ ಆಫ್ರಿಕಾ ಸರ್ಕಾರ ಮತ್ತು ಆಡಳಿತಾರೂಢ ಆಫ್ರಿಕನ್ ರಾಷ್ಟ್ರೀಯ ಕಾಂಗ್ರೆಸ್ (ಎಎನ್‌ಸಿ) ಆಕ್ರೋಶ ವ್ಯಕ್ತಪಡಿಸಿವೆ. ಟ್ರಂಪ್ ಮಾಡಿದ ಆರೋಪಗಳನ್ನು ಪುನರಾವರ್ತಿಸಿ, ಟ್ರಂಪ್ ಮತ್ತು ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಇಬ್ಬರ ವಿರುದ್ಧವೂ ಎಎನ್‌ಸಿ ಪ್ರಧಾನ ಕಾರ್ಯದರ್ಶಿ ಫಿಕಿಲೆ ಎಂಬಲುಲಾ ವಾಗ್ದಾಳಿ




ನಡೆಸಿದರು. ಎಂಬಲುಲಾ ಅವರು ಇಬ್ಬರು ಅಮೇರಿಕನ್ ನಾಯಕರ ಹೇಳಿಕೆಗಳನ್ನು "ಸುಳ್ಳು" ಎಂದು ಕರೆದರು.

## ಸೌದಿ ಅರೇಬಿಯಾ ಜೊತೆ ಭಾರತ ಹಜ್ ಒಪ್ಪಂದ



ಜೆಡ್ಡಾ: ಪವಿತ್ರ ಹಜ್ ಯಾತ್ರೆಗಾಗಿ ಸೌದಿ ಅರೇಬಿಯಾ ಜೊತೆ ಭಾರತ ದ್ವಿಪಕ್ಷೀಯ ಒಪ್ಪಂದಕ್ಕೆ ಸಹಿ ಹಾಕಿದೆ. ಜೆಡ್ಡಾದಲ್ಲಿ ನಡೆದ ಸಭೆಯಲ್ಲಿ ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಹಜ್ ಒಪ್ಪಂದಕ್ಕೆ ಸಹಿ ಹಾಕಿದರು. 2026ರಲ್ಲಿ ಹಜ್ ಯಾತ್ರೆಗೆ ಭಾರತೀಯರ ಕೋಟಾವನ್ನು 1,75,025ಕ್ಕೆ ನಿಗದಿಪಡಿಸಲಾಗಿದೆ. ಕಿರಣ್ ರಿಜಿಜು, ಮೂರು ದಿನಗಳ ಸೌದಿ ಅರೇಬಿಯಾ ಪ್ರವಾಸ ಕೈಗೊಂಡಿದ್ದರು. ಈ ಸಂದರ್ಭದಲ್ಲಿ ಜೆಡ್ಡಾದಲ್ಲಿ ಸೌದಿ ಅರೇಬಿಯಾದ ಹಜ್ ಹಾಗೂ ಉಮ್ರಾ ಸಚಿವ ತೌಫಿಕ್ ಬಿನ್ ಫೌಜಾನ್ ಅಲ್ ರಬಿಯಾ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

## 'ಫಂಗ್-ವಾಂಗ್' ಚಂಡಮಾರುತಕ್ಕೆ ತತ್ತರಿಸಿದ ಫಿಲಿಪ್ಪೀನ್ಸ್

ಇಸಾಬೆಲಾ: ಉತ್ತರ ಫಿಲಿಪ್ಪೀನ್ಸ್ ತೀರಕ್ಕೆ ಭಾನುವಾರ ರಾತ್ರಿ 'ಫಂಗ್-ವಾಂಗ್' ಚಂಡಮಾರುತ ಅಪ್ಪಳಿಸಿದ್ದು, ಇಬ್ಬರು ಮೃತಪಟ್ಟಿದ್ದಾರೆ. ಭೂಕುಸಿತದ ಭೀತಿಯಿಂದ 10 ಲಕ್ಷಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ. ಚಂಡಮಾರುತದ ಪ್ರಭಾವಕ್ಕೆ ಸಿಕ್ಕಿ ಹಲವಾರು ಪ್ರದೇಶಗಳಲ್ಲಿ ಅಪಾರ ಹಾನಿಯಾಗಿದೆ. ಭಾರಿ ಮಳೆಗೆ ರಸ್ತೆ, ವಿದ್ಯುತ್ ಸಂಪರ್ಕ ಕಡಿತಗೊಂಡಿದೆ. ನದಿಯಲ್ಲಿ ವ್ಯಕ್ತಿಯೊಬ್ಬರ ಶವ ಪತ್ತೆಯಾಗಿದ್ದು, ಕುಸಿದು ಬಿದ್ದ ಮನೆಯೊಂದರ ಅವಶೇಷಗಳಡಿ ಮಹಿಳೆಯೊಬ್ಬರ ಮೃತದೇಹ



ಪತ್ತೆಯಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಪಾಕಿಸ್ತಾನದ ಸಿಂಧ್ ಪ್ರಾಂತ್ಯದಲ್ಲಿ 10 ಲಕ್ಷಕ್ಕೂ ಹೆಚ್ಚು ಬಾಲ ಕಾರ್ಮಿಕರು..!



ಕರಾಚಿ: ಪಾಕಿಸ್ತಾನದ ಸಿಂಧ್ ಪ್ರಾಂತ್ಯದಲ್ಲಿ 10 ಲಕ್ಷಕ್ಕೂ ಹೆಚ್ಚು ಮಕ್ಕಳು ಬಾಲ ಕಾರ್ಮಿಕರಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹೆಚ್ಚಿನವರು 5 ರಿಂದ 17 ವರ್ಷದವರಾಗಿದ್ದಾರೆ ಎಂದು ಸಿಂಧ್‌ನ ಕಾರ್ಮಿಕ ಇಲಾಖೆಯ ಮಹಾನಿರ್ದೇಶಕ ಸೈಯದ್ ಮೊಹಮ್ಮದ್ ಮುರ್ತಾಜಾ ಅಲಿ ಶಾ ಹೇಳಿದ್ದಾರೆ. ಜುಲೈನಿಂದ ಆಗಸ್ಟ್‌ವರೆಗೆ ಸಮೀಕ್ಷೆ ನಡೆಸಲಾಗಿದ್ದು, 10.6ಲಕ್ಷ (5–17 ವರ್ಷದ ಶೇ 10:3) ಮಕ್ಕಳು ಬಾಲ ಕಾರ್ಮಿಕರಾಗಿ ಕೆಲಸ ಮಾಡುತ್ತಿದ್ದಾರೆ. ಆದರೆ ಸಿಂಧ್ ಪ್ರಾಂತ್ಯವೊಂದರಲ್ಲೇ 8 ಲಕ್ಷ ಮಕ್ಕಳು (10–17 ವರ್ಷದ ಶೇ 50.4ರಷ್ಟು ಮಕ್ಕಳು) ಅಪಾಯಕಾರಿ ಮತ್ತು ಶೋಷಣೆಯ ಪರಿಸ್ಥಿತಿಗಳಲ್ಲಿ ಕೆಲಸ ಮಾಡುತ್ತಿದ್ದಾರೆ.

## ರಾತೋರಾತ್ರಿ ಸಂವಿಧಾನ ತಿದ್ದುಪಡಿ ಮಾಡಿದ ಪಾಕಿಸ್ತಾನ !

ಇಸ್ಲಾಮಾಬಾದ್ : ಪಾಕಿಸ್ತಾನ ಸರ್ಕಾರ ರಾತ್ರೋರಾತ್ರಿ ತನ್ನ ಸಂವಿಧಾನವನ್ನು ತಿದ್ದುಪಡಿ ಮಾಡಲು ಮಹತ್ವದ ಮಸೂದೆಯನ್ನು ಮಂಡಿಸಿದ್ದು, ಹೊಸ ಹುದ್ದೆಯನ್ನು ಸೃಷ್ಟಿಸಿದೆ. ಈ ಹುದ್ದೆಯ ಜವಾಬ್ದಾರಿಯನ್ನು ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್‌ಗೆ ವಹಿಸಲಾಗಿದೆ. ಪಾಕಿಸ್ತಾನ ಸರ್ಕಾರ ಪ್ರಸ್ತಾಪಿಸಿರುವ ಈ ಹೊಸ ಹುದ್ದೆಯನ್ನು ರಕ್ಷಣಾ ಪಡೆಗಳ ಮುಖ್ಯಸ್ಥ ಎಂದು ಕರೆಯಲಾಗುತ್ತದೆ. ಈ ಹೊಸ ತಿದ್ದುಪಡಿ ಮಸೂದೆಯಡಿಯಲ್ಲಿ,



ಪ್ರಧಾನಿ ಶಹಬಾಜ್ ಷರೀಫ್ ಅವರ ಸಲಹೆಯ ಮೇರೆಗೆ ಅಧ್ಯಕ್ಷರು ಅಸಿಮ್ ಮುನೀರ್ ರವರನ್ನು ಈ ಸ್ಥಾನಕ್ಕೆ ನೇಮಿಸಲಿದ್ದಾರೆ.

## ರಾಜ್ಯಮಟ್ಟದ ಚೆಸ್ ಪಂದ್ಯಾವಳಿಯಲ್ಲಿ ಸಮರ್ಥ್ ಭಟ್ ಆಯ್ಕೆ



ಮಂಗಳೂರು: ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠ, ನಾಗಮಂಗಲ ಮಂಡ್ಯ ಇಲ್ಲಿ ನಡೆದ ರಾಜ್ಯಮಟ್ಟದ ಬಾಲಕರ ಚೆಸ್ ಪಂದ್ಯಾವಳಿಯಲ್ಲಿ ಎಸ್‌ಡಿಎಂ ಆಂಗ್ಲ ಮಾಧ್ಯಮ ಶಾಲೆ, ಧರ್ಮಸ್ಥಳದ ಏಳನೇ ತರಗತಿಯ ಸಮರ್ಥ ಭಟ್ ತೃತೀಯ ಸ್ಥಾನ ಗಳಿಸಿ ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಇವರಿಗೆ ಎಸ್. ಡಿ.ಎಂ.ಶಿಕ್ಷಣ ಸಂಸ್ಥೆ, ಶಾಲಾ ಮುಖ್ಯೋಪಾಧ್ಯಾಯನಿಯವರು, ಶಿಕ್ಷಕವೃಂದ ಅಭಿನಂದನೆಯನ್ನು ಸಲ್ಲಿಸಿದ್ದಾರೆ.

## ಬಾಕ್ಸಿಂಗ್‌ನಲ್ಲಿ ರಚಿತ್ ತರುಣ್‌ಗೆ ಚಿನ್ನದ ಪದಕ

ಬೆಂಗಳೂರು: ನಗರದ ರಚಿತ್ ತರುಣ್ ಕೆ. ಅವರು ಕರ್ನಾಟಕ ಮಿನಿ ಗೇಮ್ಸ್‌ನಲ್ಲಿ ಬಾಲಕರ 58ರಿಂದ 60 ಕೆಜಿ ವಿಭಾಗದೊಳಗಿನವರ ಬಾಕ್ಸಿಂಗ್ ಸ್ಪರ್ಧೆಯಲ್ಲಿ ಚಿನ್ನದ ಸಾಧನೆ ಮಾಡಿದರು. ಸತತ ಮೂರು ಪಂದ್ಯಗಳಲ್ಲಿ ಪ್ರಾಬಲ್ಯ ಸಾಧಿಸಿದ ರಚಿತ್ ಅವರು ಫೈನಲ್‌ನಲ್ಲಿ ಆರ್‌ಎಸ್‌ಸಿ ಮೂಲಕ ಗೆಲುವು ಸಾಧಿಸಿ, ಚಿನ್ನದ ಪದಕ ಗೆದ್ದಿದ್ದಾರೆ. ಕರ್ನಾಟಕ ಒಲಿಂಪಿಕ್ ಸಂಸ್ಥೆ ಮತ್ತು ಯುವ ಸಬಲೀಕರಣ ಮತ್ತು



ಕ್ರೀಡಾ ಅಭಿವೃದ್ಧಿ ಇಲಾಖೆಯ ಸಹಭಾಗಿತ್ವದಲ್ಲಿ ಕ್ರೀಡಾಕೂಟ ಈಚೆಗೆ ನಡೆಯಿತು.

## ರೈತ ಸಮೂಹದಿಂದ ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಲು ಕೂಗು!



ಹಾವೇರಿ: ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಅತೀ ವೃಷ್ಟಿಯಿಂದ ಬೆಳೆಗಳು ಹಾನಿಯಾಗಿ ರೈತರು ನಷ್ಟ ಅನುಭವಿಸಿದ್ದರೆ, ಇನ್ನೊಂದೆಡೆ ಕಷ್ಟಪಟ್ಟು ಬೆಳೆದ ಮೆಕ್ಕೆಜೋಳ ಫಸಲು ಕೈಸೇರುವ ವೇಳೆ ದರ ಕುಸಿತ ಕಂಡಿರುವುದು ರೈತರನ್ನು ಮತ್ತೂಷ್ಟು ಇಕ್ಕಟ್ಟಿಗೆ ಸಿಲುಕುವಂತೆ ಮಾಡಿದ್ದು, ಕೂಡಲೇ ಜಿಲ್ಲೆಯಲ್ಲಿ ಮೆಕ್ಕೆಜೋಳ ಖರೀದಿ ಕೇಂದ್ರ ಆರಂಭಿಸಬೇಕು ಎಂಬ ಕೂಗು ರೈತ ಸಮೂಹದಿಂದ ಹೆಚ್ಚುತ್ತಿದೆ. ಜಿಲ್ಲೆಯ ಪ್ರಮುಖ ಬೆಳೆಗಾಗಿರುವ ಮೆಕ್ಕೆಜೋಳವನ್ನು ಅತಿವೃಷ್ಟಿಯ ಮಧ್ಯೆಯೂ ಈ ವರ್ಷ ಒಟ್ಟು 2.74ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗಿದೆ. ಜಿಲ್ಲೆಯ ಒಟ್ಟಾರೆ ಕೃಷಿ ಭೂಮಿಯಲ್ಲಿ ಶೇ. 75ರಷ್ಟು ಗೋವಿನಜೋಳ ಬೆಳೆಯಿದೆ.

## ತೇಜಸ್ವಿ ಸೂರ್ಯ ಐರನ್‌ಮ್ಯಾನ್ ಓಟದಲ್ಲಿ ಮತ್ತೆ ಸಾಧನೆ

ಬೆಂಗಳೂರು : ಬೆಂಗಳೂರು ದಕ್ಷಿಣ ಕ್ಷೇತ್ರದ ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಸತತ ಎರಡನೇ ಬಾರಿಗೆ ಗೋವಾದಲ್ಲಿ ನಡೆದ ಐರನ್‌ಮ್ಯಾನ್ 70.3 ಓಟವನ್ನು ಯಶಸ್ವಿಯಾಗಿ ಪೂರ್ಣಗೊಳಿಸುವ ಮೂಲಕ ತಮ್ಮ ದೈಹಿಕ ಸಾಮರ್ಥ್ಯ ಮತ್ತು ಶಿಸ್ತಿಗೆ ಮಾದರಿಯಾಗಿದ್ದಾರೆ. ಈ ವರ್ಷದ ಐರನ್ ಮ್ಯಾನ್ ಓಟದಲ್ಲಿ



ತಮಿಳುನಾಡು ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ಕೆ. ಅಣ್ಣಾಮಲೈ ಅವರು ಸಹ ಭಾಗವಹಿಸಿದ್ದು ಮತ್ತೊಂದು ವಿಶೇಷ. ಸಂಸದ ತೇಜಸ್ವಿ ಸೂರ್ಯ ಸ್ಪರ್ಧೆಯ ಮೂರು ಕಠಿಣ ಹಂತಗಳಾದ 1.9 ಕಿ.ಮೀ ಈಜು, 90 ಕಿ.ಮೀ ಸೈಕ್ಲಿಂಗ್ ಮತ್ತು 21.1 ಕಿ.ಮೀ ಓಟವನ್ನು 7 ಗಂಟೆ 49 ನಿಮಿಷಗಳಲ್ಲಿ ಪೂರ್ಣಗೊಳಿಸಿದ್ದಾರೆ.

## ಕಾಡಾನೆಗಳ ದಾಂಧಲೆ: ಕಾಳಗದಲ್ಲಿ ದಂತ ಮುರಿದುಕೊಂಡ ಭೀಮ

ಹಾಸನ : ಜನರ ಬಳಿಯೇ ಓಡಾಡುತ್ತಾ ಯಾರಿಗೂ ಏನೂ ಮಾಡುವುದಿಲ್ಲ ಎಂಬ ನಂಬಿಕೆ ಮೂಡಿಸಿದ್ದ ಭೀಮ, ಈಗ ಊರಿನ ಜನರಲ್ಲಿ ಆತಂಕ ಮೂಡುವಂತೆ ಮಾಡಿದೆ. ಗ್ರಾಮದೊಳಗೆ ಸಿಕ್ಕ ಸಿಕ್ಕದ್ದನ್ನು ಪುಡಿಗಟ್ಟಿ ಅಟ್ಟಹಾಸ ಮೆರೆಯುತ್ತಿರುವ ಬೃಹತ್ ಸಲಗ ಮತ್ತೊಂದು ಮದವೇರಿದ ಕಾಡಾನೆ ಜೊತೆಗಿನ ಕಾಳಗದಲ್ಲಿ ಒಂದು ದಂತವನ್ನೇ ಮುರಿದುಕೊಂಡಿದೆ. ಇದೀಗ ಭೀಮ ನಡೆಸುತ್ತಿರುವ ದಾಂಧಲೆ ಅರಣ್ಯ ಇಲಾಖೆಗೆ ದೊಡ್ಡ ತಲೆ ನೋವು ತರಿಸಿದೆ. ಕಳೆದ ಐದಾರು ವರುಷಗಳಿಂದ ಹಾಸನ ಜಿಲ್ಲೆಯ ಸಕಲೇಶಪುರ ಹಾಗೂ ಬೇಲೂರು ತಾಲ್ಲೂಕಿನ ವಿವಿಧೆಡೆ ಸಂಚಾರ ಮಾಡುತ್ತಾ, ಶಾಂತವಾಗಿ ಓಡಾಡುತ್ತಿದ್ದ ಭೀಮ ಇದೀಗ ಮತ್ತೆ ಆತಂಕ ಮೂಡಿಸಿದೆ.



## ಜಪಾನ್ ಕಂಪನಿಗಳಿಗೆ ಭೂಮಿ ಮಂಜೂರು ಮಾಡಲು ನಿರ್ಧಾರ

ಬೆಂಗಳೂರು: ಜಪಾನಿನ ಕಂಪನಿಗಳು ರಾಜ್ಯದಲ್ಲಿ ತಮ್ಮ ಕಂಪನಿ ಸ್ಥಾಪಿಸಲು 300 ಎಕರೆಗಳಿಗೂ ಹೆಚ್ಚು ಭೂಮಿಯನ್ನು ಮೀಸಲಿಡಲಾಗಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ (ಕರ್ನಾಟಕ ಸರ್ಕಾರ) ಪ್ರಧಾನ ಕಾರ್ಯದರ್ಶಿ ಡಾ. ಸೆಲ್ವ ಕುಮಾರ್ ಘೋಷಿಸಿದರು. ತುಮಕೂರಿನಲ್ಲಿರುವ ಜಪಾನೀಸ್




ಕೈಗಾರಿಕಾ ಪಟ್ಟಣದಂತಹ ಯೋಜನೆಗಳು ಭವಿಷ್ಯದ ಬೆಳವಣಿಗೆಗೆ ಬೆಂಬಲ ನೀಡಲು ನಮ್ಮನ್ನು ಪ್ರೇರೇಪಿಸುತ್ತವೆ ಎಂದು ಹೇಳಿದರು. ಜಪಾನಿನ ಕಂಪನಿಗಳಿಗೆ ಕರ್ನಾಟಕ ಸಂಪೂರ್ಣ ಬೆಂಬಲ ಕೊಡುವುದಾಗಿ ಭರವಸೆ ನೀಡಿದರು. ಜಪಾನ್‌ನ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೂ ಭರವಸೆಯನ್ನು ವಿಸ್ತರಿಸಲಾಯಿತು.

## ಎಲ್ಲಾ ಕಾರ್ಯಕ್ರಮಕ್ಕೆ ಸರ್ಕಾರದ ಅನುಮತಿ ಅಗತ್ಯ : ಪ್ರಿಯಾಂಕ್ ಖರ್ಗೆ!



ಬೆಂಗಳೂರು : ಸಾರ್ವಜನಿಕ ಸ್ಥಳಗಳಲ್ಲಿ ನಡೆಯುವ ಕಾರ್ಯಕ್ರಮಗಳಿಗೆ ಅನುಮತಿ ಪಡೆಯುವ ಕಾಂಗ್ರೆಸ್ ಸರ್ಕಾರದ ನಿಯಮಕ್ಕೆ ಬಿಜೆಪಿ ತಡೆ ತಂದಿರುವುದನ್ನು ಸಚಿವ ಪ್ರಿಯಾಂಕ್ ಖರ್ಗೆ ಪ್ರಶ್ನಿಸಿದ್ದಾರೆ. ಬೆಂಗಳೂರು ವಿಮಾನ ನಿಲ್ದಾಣದ ಟರ್ಮಿನಲ್ 2ರಲ್ಲಿ ಸಾಮೂಹಿಕ ನಮಾಜ್ ಮಾಡಿದ ಬಗ್ಗೆ ಮಾಧ್ಯಮ ಪ್ರತಿನಿಧಿಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಏರ್ಪೋರ್ಟ್‌ಗಳಲ್ಲಿ ಪ್ರಾರ್ಥನೆಗೆ ಪ್ರತ್ಯೇಕ ಕೊಠಡಿಗಳು ಇರುತ್ತವೆ. ಆದರೆ, ಇಲ್ಲಿ ಸಾರ್ವಜನಿಕವಾಗಿ ನಮಾಜ್ ಮಾಡಿದ್ದಾರೆ ಎನ್ನಲಾಗಿದೆ. ಆರ್‌ಎಸ್‌ಎಸ್ ಅಥವಾ ನಮಾಜ್ ಯಾವುದೇ ಕಾರ್ಯಕ್ಕೆ ಅನುಮತಿ ಅಗತ್ಯ. ಸಾರ್ವಜನಿಕರಿಗೆ ತೊಂದರೆಯಾಗಬಾರದು ಎಂಬುದು ತಮ್ಮ ಸರ್ಕಾರದ ನಿಲುವು ಎಂದರು.

## ಭಾರತ ಎಂದಿಗೂ ಹಿಂದೂರಾಷ್ಟ್ರ ಆಗೋದಿಲ್ಲ- ಸಿದ್ದರಾಮಯ್ಯ

ಮೈಸೂರು : ಭಾರತ ಎಂದಿಗೂ ಹಿಂದೂರಾಷ್ಟ್ರ ಎಂದು ಆರೆಸ್ಸೆಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರ ಹೇಳಿಕೆಗೆ ತಿರುಗೇಟು ನೀಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಭಾರತ ಎಂದಿಗೂ ಹಿಂದೂರಾಷ್ಟ್ರ ಆಗೋದಿಲ್ಲ. ನಮ್ಮದು ಬಹುತ್ವದ ರಾಷ್ಟ್ರ. ಹಲವು ಕಲೆ ಸಂಸ್ಕೃತಿ ಭಾಷೆ ಧರ್ಮಗಳಿರುವ ದೇಶ. ಆರ್



ಎಸ್ ಎಸ್ ಸಂಘಪರಿವಾರ ಬಹಳ ದಿನದಿಂದ ಈ ರೀತಿ ಹೇಳುತ್ತಿದೆ. ಆದರೆ ಇದು ಎಂದಿಗೂ ಆಗುವುದಿಲ್ಲ ಎಂದು ಮೈಸೂರಿನಲ್ಲಿ ಹೇಳಿದ್ದಾರೆ. ದೆಹಲಿ ಬಾಂಬ್ ಸ್ಫೋಟ ಪ್ರಕರಣ ಬಿಹಾರ ಚುನಾವಣೆ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಅದು ಬಿಜೆಪಿ ವಿರುದ್ಧವಾಗಿ ಪರಿಣಾಮ ಬೀರಲಿದೆ ಎಂದರು.

## ಅಮಾಯಕರನ್ನು ಕೊಲ್ಲುವುದು ದೊಡ್ಡ ಪಾಪ : ಮೌಲಾನಾ ಸೈಯದ್

ಲಕ್ನೋ: ದೆಹಲಿಯಲ್ಲಿ ಸಂಭವಿಸಿದ ಮಾರಣಾಂತಿಕ ಸ್ಫೋಟದಲ್ಲಿ 12 ಜನರು ಸಾವಿಗೀಡಾಗಿದ್ದು, ಶಿಯಾ ಧರ್ಮಗುರು ಮೌಲಾನಾ ಸೈಯದ್ ಕಲ್ಬೆ ಜವಾದ್, ಅಮಾಯಕರನ್ನು ಕೊಲ್ಲುವುದು ಇಸ್ಲಾಂನಲ್ಲಿ 'ಅತಿದೊಡ್ಡ ಪಾಪ' ಎಂದು ಹೇಳಿದ್ದಾರೆ. ದೆಹಲಿ ಸ್ಫೋಟದಲ್ಲಿ ಪಾಕಿಸ್ತಾನದ ಕೈವಾಡವಿದೆ ಎಂದು ಆರೋಪಿಸಿದ ಅವರು, ನೆರೆಯ ದೇಶವನ್ನು ಸಂಪೂರ್ಣವಾಗಿ ಬಹಿಷ್ಕರಿಸಬೇಕೆಂದು ಅವರು ಕರೆ ನೀಡಿದರು. 'ಇಸ್ಲಾಂನಲ್ಲಿ ಇದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ. ಅಮಾಯಕನನ್ನು ಕೊಲ್ಲುವುದು ಅತ್ಯಂತ ದೊಡ್ಡ ಪಾಪ. ಆರೋಪಿಗಳು ಮುಸ್ಲಿಮರಾಗಲು ಸಾಧ್ಯವಿಲ್ಲ, ಅವರು ಹೆಸರಿಗಾಗಿ ಮುಸ್ಲಿಮರು ಎಂದು ಹೇಳಿದರು.



## ಉತ್ತರ ಪ್ರದೇಶದ ಶಾಲೆ-ಕಾಲೇಜುಗಳಲ್ಲಿ 'ವಂದೇ ಮಾತರಂ' ಕಡ್ಡಾಯ

ಲಖನೌ: ಉತ್ತರ ಪ್ರದೇಶದಾದ್ಯಂತ ಎಲ್ಲಾ ಶಾಲೆಗಳು ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ 'ವಂದೇ ಮಾತರಂ' ಗೀತೆಯನ್ನು ಹಾಡುವುದನ್ನು ಕಡ್ಡಾಯಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಘೋಷಿಸಿದ್ದಾರೆ. ರಾಷ್ಟ್ರೀಯ ಗೀತೆಯ 150ನೇ ವರ್ಷಾಚರಣೆಯ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ



ಅವರು ರಾಷ್ಟ್ರವ್ಯಾಪಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬೆನ್ನಲ್ಲೇ ಈ ನಿರ್ಧಾರ ಹೊರಬಿದ್ದಿದೆ. "ವಂದೇ ಮಾತರಂ ಬಗ್ಗೆ ಎಲ್ಲರಿಗೂ ಗೌರವದ ಭಾವನೆ ಇರಬೇಕು. ನಾವು ಉತ್ತರ ಪ್ರದೇಶದ ಪ್ರತಿಯೊಂದು ಶಾಲೆ ಮತ್ತು ಶಿಕ್ಷಣ ಸಂಸ್ಥೆಯಲ್ಲಿ ಇದರ ಗಾಯನವನ್ನು ಕಡ್ಡಾಯಗೊಳಿಸುತ್ತೇವೆ," ಎಂದು ಹೇಳಿದರು.

## ತಿರುಪತಿಗೆ 5 ವರ್ಷಗಳ ಕಾಲ ತುಪ್ಪ ಪೂರೈಸಿದ್ದ ನಕಲಿ ಡೈರಿ



ತಿರುಪತಿ : ಉತ್ತರಾಖಂಡ ಮೂಲದ ಡೈರಿಯೊಂದು ಎಲ್ಲಿಂದಲೂ ಒಂದು ಹನಿ ಹಾಲು, ಬೆಣ್ಣೆಯನ್ನು ಖರೀದಿಸದೆ ತಿರುಪತಿಗೆ ಕಳೆದ ಐದು ವರ್ಷಗಳಿಂದ ತುಪ್ಪ ಪೂರೈಸಿರುವ ಕುರಿತು ಹಲವು ಪ್ರಶ್ನೆಗಳೆದ್ದಿವೆ. 2019 ಮತ್ತು 2024ರ ನಡುವೆ, ಆಂಧ್ರಪ್ರದೇಶದ ಪ್ರಸಿದ್ಧ ತಿರುಪತಿ ದೇವಸ್ಥಾನವನ್ನು ನಡೆಸುತ್ತಿರುವ ತಿರುಮಲ ತಿರುಪತಿ ದೇವಸ್ಥಾನಂ (ಟಿಟಿಡಿ) ಗೆ 250ಕೋಟಿ ರೂ. ಮೌಲ್ಯದ 68ಲಕ್ಷ ಕಿಲೋಗ್ರಾಂಗಳಷ್ಟು ತುಪ್ಪವನ್ನು ಪೂರೈಸುವಲ್ಲಿ ಯಶಸ್ವಿಯಾಗಿತ್ತು. ತಿರುಪತಿ ಲಡ್ಡು ತುಪ್ಪದ ಕಲಬೆರಕೆಯ ಕುರಿತಾದ ಸಿಬಿಐ ತನಿಖೆಯಲ್ಲಿ ಇದು ಬಹಿರಂಗವಾಗಿದೆ.

## ಗುಜರಿ ಮಾರಾಟದಿಂದ ಬೃಹತ್ ಆದಾಯಗಳಿಸಿದ ಕೇಂದ್ರ ಸರ್ಕಾರ

ನವದೆಹಲಿ: ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು ಕಳೆದ ತಿಂಗಳು ಹಮ್ಮಿಕೊಂಡಿದ್ದ ಬೃಹತ್ ಸ್ವಚ್ಛತಾ ಅಭಿಯಾನದ ವೇಳೆ ಗುಜರಿ (ನಿರುಪಯೋಗಿ ವಸ್ತುಗಳ) ಮಾರಾಟದಿಂದ 800 ರೂ. ಕೋಟಿಗಳಷ್ಟು ಗಣನೀಯ ಆದಾಯ ಗಳಿಸಿದೆ. ಗಮನಾರ್ಹ ಸಂಗತಿಯೆಂದರೆ, ಈ ಮೊತ್ತವು ಯಶಸ್ವಿಯಾಗಿ



ಚಂದ್ರನ ಮೇಲೆ ಇಳಿದ ಚಂದ್ರಯಾನ-3 ಮಿಷನ್‌ನ ಬಜೆಟ್ 615 ಕೋಟಿ ರೂಪಾಯಿಗಿಂತಲೂ ಹೆಚ್ಚಾಗಿದೆ. 2021 ರಲ್ಲಿ ವಾರ್ಷಿಕ ಅಭಿಯಾನ ಪ್ರಾರಂಭವಾದಾಗಿನಿಂದ ಇಲ್ಲಿಯವರೆಗಿನ ಒಟ್ಟು ಸರ್ಕಾರಿ ಆದಾಯವು ಇದೀಗ ಬರೋಬ್ಬರಿ 4,100 ಕೋಟಿ ರೂ.ಗಳಿಗೆ ತಲುಪಿದೆ.

## ಕೇಂದ್ರದಿಂದ ಆಳ ಸಮುದ್ರ ಮೀನುಗಾರಿಕೆಗೆ ಹೊಸ ನಿಯಮ

ನವದೆಹಲಿ : ಭಾರತದ ವಿಶಾಲ ಸಮುದ್ರ ಸಂಪನ್ಮೂಲಗಳ ಸಾಮರ್ಥ್ಯವನ್ನು ಬಳಸಿಕೊಳ್ಳುವ ಅತ್ಯಂತ ಮಹತ್ವದ ಕ್ರಮದಲ್ಲಿ, ಮೀನುಗಾರರು, ಸಹಕಾರಿಗಳು ಮತ್ತು ಸಣ್ಣ ಪ್ರಮಾಣದ ಮೀನುಗಾರರನ್ನು ಸಬಲೀಕರಣಗೊಳಿಸುವತ್ತ ಕೇಂದ್ರ ಸರ್ಕಾರ ಗಮನಹರಿಸಿದೆ. ಇದರ ಅನ್ವಯ ವಿದೇಶಿ ಹಡಗುಗಳು ಭಾರತೀಯ ಜಲಪ್ರದೇಶದಲ್ಲಿ ಕಾರ್ಯನಿರ್ವಹಿಸುವುದನ್ನು ನಿಷೇಧಿಸುವ ಮೂಲಕ, ದೇಶದ ವಿಶೇಷ ಆರ್ಥಿಕ ವಲಯ (EEZ)ದಲ್ಲಿ ಆಳ ಸಮುದ್ರ ಮೀನುಗಾರಿಕೆಗೆ ಹೊಸ ನಿಯಮಗಳನ್ನು ಕೇಂದ್ರವು ಸೂಚಿಸಿದೆ. ಅಧಿಸೂಚನೆ ಹೊರಡಿಸಲಾದ ಈ ನಿಯಮಗಳು 2025-26ರ ಬಜೆಟ್‌ನಲ್ಲಿ ಮಾಡಲಾದ ಘೋಷಣೆಯನ್ನು ಪೂರೈಸಿದೆ. ಭಾರತದ ಸಮುದ್ರ ಮೀನುಗಾರಿಕೆ ವಲಯಕ್ಕೆ ಹೊಸ ಮಾರ್ಗಗಳನ್ನು ತೆರೆಯುವ ನಿರೀಕ್ಷೆಯಿದೆ. ಗ್ಯಾದರ್, ಬುಗಡಿ, ಚೂರಾ ಎಂದೇ ಕರ್ನಾಟಕದ ಕರಾವಳಿ ಪ್ರದೇಶದಲ್ಲಿ ಕರೆಸಿಕೊಳ್ಳುವ ಟ್ಯುನ ಮೀನಿನ ಸಂಪನ್ಮೂಲಗಳನ್ನು ಹಿಂದೂ ಮಹಾಸಾಗರದ ಪ್ರದೇಶದಲ್ಲಿ ನೆರೆಯ ರಾಷ್ಟ್ರಗಳು ವ್ಯಾಪಕವಾಗಿ ಕೊಯ್ಲು ಮಾಡುತ್ತಿವೆ. ಹೊಸ ನಿಯಮವು ಈ ಸಂಪನ್ಮೂಲಗಳನ್ನು ವ್ಯಾಪಕವಾಗಿ ಬಳಸಲು ಅನುವು ಮಾಡಿಕೊಡುತ್ತದೆ ಎಂದು ಮೀನುಗಾರಿಕೆ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಅದರೊಂದಿಗೆ ತಾಂತ್ರಿಕವಾಗಿ ಮುಂದುವರಿದ ಹಡಗುಗಳನ್ನು



ಬಳಸಿಕೊಂಡು ಆಳ ಸಮುದ್ರ ಮೀನುಗಾರಿಕೆ ಕಾರ್ಯಾಚರಣೆಗಳನ್ನು ಕೈಗೊಳ್ಳಲು ಮೀನುಗಾರರ ಸಹಕಾರ ಸಂಘಗಳು ಮತ್ತು ಮೀನು ರೈತ ಉತ್ಪಾದಕ ಸಂಸ್ಥೆಗಳಿಗೆ (FFPOs) ಆದ್ಯತೆ ನೀಡುತ್ತದೆ.



# ದೀಪಗಳ ಉತ್ಸವ ವೈಭವವೇ ಶ್ರೀ ಕ್ಷೇತ್ರ ಧರ್ಮಸ್ಥಳದ ಲಕ್ಷ ದೀಪೋತ್ಸವ

ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ತನ್ನದೇ ಆದ ಪ್ರಾಚೀನವಾದ ಪರಂಪರೆ ಹಾಗೂ ಪ್ರಬಲವಾದ ಧಾರ್ಮಿಕ ಹಿನ್ನಲೆಯಿದೆ. ಇಲ್ಲಿನ ಧರ್ಮಾಧಿಕಾರಿಗಳು ದೇವರ ಸೇವೆ, ಸಾನಿಧ್ಯ ರಕ್ಷಣೆಗೆ ಪ್ರಥಮ ಮಾನ್ಯತೆ ನೀಡುತ್ತಾ ಬಂದಿದ್ದಾರೆ. ಹೀಗಾಗಿ ಇಲ್ಲಿ ನಡೆಯುವ ಪೂಜೆ, ಆರಾಧನೆ, ರಥೋತ್ಸವ ವಿವಿಧ ಧಾರ್ಮಿಕ ಆಚರಣೆಗಳು, ಅತ್ಯಂತ ಹೆಚ್ಚು ಶಾಸ್ತ್ರೋಕ್ತವಾಗಿ ನಡೆಯುತ್ತಿವೆ. ಈ ನಿಟ್ಟಿನಲ್ಲಿ ಕಾರ್ತಿಕ ಮಾಸ ಕೃಷ್ಣಪಕ್ಷದ ಏಕಾದಶಿಯಿಂದ ಆರಂಭವಾಗಿ ಅಮಾವಾಸ್ಯೆಯವರೆಗೆ ಧರ್ಮಸ್ಥಳದಲ್ಲಿ ನಡೆಯುವ ಲಕ್ಷದೀಪೋತ್ಸವ ಕೇವಲ ಕ್ಷೇತ್ರಕ್ಕಷ್ಟೇ ಸೀಮಿತವಾಗಿರದೆ ನಾಡಿನಾದ್ಯಂತ ಪ್ರಸಿದ್ಧವಾಗಿರುವ ಈ ಉತ್ಸವದಲ್ಲಿ ಲಕ್ಷಾಂತರ ಮಂದಿ ಭಾಗವಹಿಸುತ್ತಾರೆ. ಸಮಸ್ತ ಆಸ್ತಿಕ ವರ್ಗಕ್ಕೂ ಸಂತಸ, ಸಂಭ್ರಮದ ಪರ್ವ. ಧರ್ಮ, ಕಲೆ, ಸಾಹಿತ್ಯ, ಸಂಸ್ಕೃತಿ ಪ್ರಿಯರಿಗೂ ಸಂಭ್ರಮಕ್ಷಣಗಳು. ಧರ್ಮಸ್ಥಳ ದೀಪ ಎಂದೇ ಕರೆಯಲಾಗುತ್ತಿರುವ ಈ ಉತ್ಸವ ಜನ ಮರುಳೋ, ಜಾತ್ರೆ ಮರುಳೋ ಎಂಬಂತಿರದೆ ಹಲವು ಹತ್ತು ಕಾರ್ಯ ಕ್ರಮಗಳ ಮೂಲಕ ಸಮಾಜಮುಖಿಯಾಗಿ ಬೆಳೆದು ನಿಂತಿರುವ ಒಂದು ಸಾಂಸ್ಕೃತಿಕ ಕೇಂದ್ರವೂ ಆಗಿದೆ. ಜನರ ನಂಬಿಕೆ, ಶ್ರದ್ಧೆ, ಭಕ್ತಿಗಳಿಂದ ಹರಿದು ಬಂದಿರುವ ಕಾಣಿಕೆಯನ್ನು ಮಾನವ ಕಲ್ಯಾಣಕ್ಕೆ ಬಳಸಿಕೊಂಡ ನಿದರ್ಶನ ಜಗಜ್ಜಾಹೀರು. ದೇವಾಲಯಗಳು ಸಮಾಜದ ಬದುಕನ್ನು ರೂಪಿಸಲು ಹೇಗೆ ಶ್ರಮಿಸಬಹುದು ಎಂಬುದಕ್ಕೆ ಧರ್ಮಸ್ಥಳ ಒಂದು ಮಾದರಿಯಾಗಿದೆ. ಯಾವಧರ್ಮವು ಮಾನವನ ಎಲ್ಲ ಶಕ್ತಿಗಳ ಪ್ರಗತಿಪರ ವಿಕಾಸಕ್ಕೆ ಕಾರಣೀ ಭೂತವಾಗುತ್ತದೋ ಆ ಧರ್ಮವೇ ನಿಜವಾದದ್ದು ಎಂಬ ಪರಿ ಕಲ್ಪನೆಯಲ್ಲಿ 'ಧರ್ಮಸ್ಥಳ' ಆದರ್ಶಪ್ರಾಯವಾಗಿ ನಿಂತಿದೆ. ಜೊತೆಗೆ ಕ್ಷೇತ್ರದಲ್ಲಿ ಧರ್ಮಾಮೃತ ಸಮಾರಾಧನೆಯೂ ನಡೆಯುತ್ತಿರುವುದು ಇಲ್ಲಿನ ವೈಶಿಷ್ಟ್ಯ. ಕಳೆದ 81 ವರ್ಷಗಳಿಂದ ಅನುಚಾನವಾಗಿ ನಡೆದುಕೊಂಡು ಬರುತ್ತಿದೆ. ಸರ್ವಧರ್ಮ ಸಮ್ಮೇಳನ ಮತ್ತು ಸಾಹಿತ್ಯ ಸಮ್ಮೇಳನ ನಡೆದುಕೊಂಡು ಬಂದಿ ದೆ. ದೀಪೋತ್ಸವಕ್ಕೆ ಬಂದವರು ಒಂದಷ್ಟು ಜ್ಞಾನವನ್ನು ಪಡೆಯಲಿ ಎಂಬ ಉದ್ದೇಶದಿಂದ 1933ರಲ್ಲಿ ಶ್ರೀ ಮಂಜಯ್ಯ ಹೆಗ್ಗಡೆಯವರು ಪ್ರಾರಂಭಿಸಿದ ಈ ಅಪೂರ್ವ ವ್ಯವಸ್ಥೆ ಮುಂದೆ ಪರಂಪರೆಯಾಗಿ ಬೆಳೆದು ಕೊಂಡು ಬಂದು, ಶ್ರೀ ರತ್ನವರ್ಮ ಹೆಗ್ಗಡೆಯವರ ಕಾಲದಲ್ಲಿ ಬೆಳ್ಳಿಹಬ್ಬವನ್ನು ಕಂಡಿತು. ಪ್ರಸ್ತುತ ಧರ್ಮಾಧಿಕಾರಿಯವರಾದ ಡಾ.ಡಿ.ವೀರೇಂದ್ರ ಹೆಗ್ಗಡೆಯವರ ನೇತೃತ್ವದಲ್ಲಿ ಇನ್ನಷ್ಟು ಪ್ರವರ್ಧಮಾನವಾಗಿ ಬೆಳೆದು, 1982ರಲ್ಲಿ ಸುವರ್ಣ ಮಹೋತ್ಸವ, 2007ರಲ್ಲಿ ಅಮೃತ ಮಹೋತ್ಸವ, ನಾಲ್ಕನೆಯ ದಿನ ಸರ್ವದರ್ಮ ಸಮ್ಮೇಳನದ 'ಮನುಜ ಕುಲಂ ಒಂದೇ ವಲಂ' ಎಂಬ ಕವಿ ಪಂಪನ ಆಶಯವನ್ನು ಈ ವೇದಿಕೆ ಪ್ರಸ್ತುತಪಡಿಸುತ್ತಿವೆ. ವೈದಿಕ, ಜೈನ, ವೀರಶೈವ, ಇಸ್ಲಾಂ, ಕ್ರಿಶ್ಚಿಯನ್, ಬೌದ್ಧ ಹೀಗೆ ಸರ್ವ ಧರ್ಮೀಯರು ತಮ್ಮ ಧರ್ಮಗಳ ಬಗ್ಗೆ ವಿಷಯ ಮಂಡಿಸಲು ಅವಕಾಶ ನೀಡಿದೆ. ಇಲ್ಲಿ ಸರ್ವ ಧರ್ಮಗಳು ಸಮನ್ವಯ ಭಾವವನ್ನು ಹೊಂದಲು ಅವಕಾಶ ಕಲ್ಪಿಸಲಾಗಿದೆ. ಐದನೆಯ ದಿನ ಸಾಹಿತ್ಯ ಸಮ್ಮೇಳನ. ಕೊನೆಯದಿನ ಶ್ರೀ ಚಂದ್ರನಾಥಸ್ವಾಮಿ ಸನ್ನಿಧಿಯಲ್ಲಿ ಸಮವಸರಣ ಪೂಜೆ ನಡೆಸುವ ಮೂಲಕ ಶ್ರೀ ಕ್ಷೇತ್ರವು ಕಲೆ, ಸಾಹಿತ್ಯ, ಸಂಸ್ಕೃತಿಗಳಿಗೆ ಪ್ರೋತ್ಸಾಹ ನೀಡಿ ಸುಜ್ಞಾನವನ್ನು ನಾಡಿನಲ್ಲೆಡೆ ಪಸರಿಸತಕ್ಕ ಕಾರ್ಯವನ್ನು ಈ ಮೂಲಕ ಕೈಗೊಳ್ಳುತ್ತಿದೆ.

**ಶ್ರೀ ಹೆಗ್ಗಡೆಯವರು ನುಡಿದಂತೆ– 'ದೀಪೋತ್ಸವ ಜ್ಯೋತಿಯ ಪ್ರತೀಕ.** ಅದು ಕತ್ತಲನ್ನು ಹೊಡೆದೋಡಿಸುವುದು ಮತ್ತು ತನ್ನ ತೇಜ ಪುಂಜದಿಂದ ಜೀವರಾಶಿಗಳಿಗೆ ಉಸಿರನ್ನು, ಶಕ್ತಿಯನ್ನು ನೀಡಿ ಬದುಕುವ ಪ್ರೇರಣೆ ನೀಡುತ್ತದೆ. ಶ್ರೀ ಸ್ವಾಮಿ ಸನ್ನಿಧಿಯಲ್ಲಿ ನಡೆಯುವ ಲಕ್ಷದೀಪೋತ್ಸವ ಲಕ್ಷಾಂತರ ಮಂದಿಯ ಮನಸ್ಸನ್ನು ಬೆಳಗಿಸುತ್ತಿದೆ ಮತ್ತು ಬೆಳೆಯುತ್ತಿದೆ. ಕಾರ್ತಿಕ ಮಾಸದಲ್ಲಿ ನಡೆಯುವ ಹಬ್ಬ ಭಕ್ತರ ನಿರೀಕ್ಷೆಯನ್ನು ಹೆಚ್ಚಿಸುತ್ತದೆ. ಶ್ರೀ ಮಂಜುನಾಥಸ್ವಾಮಿ ದೇವಾಲಯದಿಂದ ರಾತ್ರಿ ಸಮಯದಲ್ಲಿ ಹೊರಬಂದು ಸರ್ವರಿಗೂ ದರ್ಶನವೀಯುತ್ತಾರೆ. ಆಗ ಭಕ್ತಾದಿಗಳೆಲ್ಲರೂ ಭೇದಭಾವಗಳಿಲ್ಲದೆ ಅಖಂಡವಾಗಿ ಜಯಘೋಷ ಹಾಕುವಾಗ 'ಮನುಜ ಕುಲವೆಲ್ಲಾ ಒಂದೇ' ಎಂಬ ಭಾವನೆ ಮೂಡುತ್ತದೆ. ದೀಪವೊಂದು ನೂರಾಗಿ, ಸಾವಿರವಾಗಿ, ಲಕ್ಷವಾಗಿ ಪಸರಿಸಿ ಮಾನವ ಸಮುದಾಯದಲ್ಲಿರುವ ಅಜ್ಞಾನದ ಅಂಧಕಾರವನ್ನು ನಾಶ ಮಾಡಲಿ, ನಾಡಿನ ಜನತೆ ಸಮೃದ್ಧಿ ಮತ್ತು ಸಂತೃಪ್ತಿಯಿಂದ ಇದ್ದು ಎಲ್ಲರಿಗೂ ಮಂಗಳವಾಗಲಿ ಎಂದು ಸ್ವಾಮಿಯಲ್ಲಿ ಹೆಗ್ಗಡೆಯವರು ಪ್ರಾರ್ಥಿಸುತ್ತಾರೆ.



ದೀಪೋತ್ಸವ ಸಂದರ್ಭ ಸರ್ವಧರ್ಮ ಸಮ್ಮೇಳನ ಹಾಗೂ ಸಾಹಿತ್ಯ ಸಮ್ಮೇಳನಗಳೊಂದಿಗೆ ವಿವಿಧ ಲಲಿತಕಲೆಗಳ ಬೆಳವಣಿಗೆಗೆ ಕೊಡುಗೆ ಅಪಾರ. 1975ರಿಂದ ಆರಂಭವಾದ ಈ ಗೋಷ್ಠಿ ವೇದಿಕೆಯಲ್ಲಿ ನೃತ್ಯ, ನಾಟಕ, ಯಕ್ಷಗಾನ ವಿವಿಧ ವಾದ್ಯ, ಸಂಗೀತಗಳಿಗೆ ಇಲ್ಲಿ ಅವಕಾಶ ಕಲ್ಪಿಸಲಾಗಿದೆ. ಅಷ್ಟೇ ಅಲ್ಲದೆ, ವಿವಿಧ ಜನಪದ ವಾದ್ಯಗಳು, ನೃತ್ಯಗಳು, ಹಾಡುಗಳು, ಶಂಖ, ಜಾಗಟೆ, ತಮಟೆ ಈ ಮೊದಲಾದ ಕಲೆ ಪ್ರಕಾರಗಳಿಗೂ ಪ್ರೋತ್ಸಾಹ ನೀಡುತ್ತಿರುವುದು ಇಲ್ಲಿನ ವಿಶೇಷವಾಗಿದೆ. ಪ್ರತಿವರ್ಷ ನಡೆಯುತ್ತಿರುವ ರಾಜ್ಯಮಟ್ಟದ ವಸ್ತುಪ್ರದರ್ಶನ ಪ್ರವರ್ಧಮಾನವಾಗಿ ಬೆಳೆಯುತ್ತಿದ್ದು, ಗ್ರಾಮೀಣ ಜನರ ಜ್ಞಾನವಿಕಾಸಕ್ಕೆ ಪೂರಕವಾದ ವಾತಾವರಣವನ್ನು ನಿರ್ಮಿಸುವಂತಾಗಿದೆ. 200ಕ್ಕೂ ಅಧಿಕ ಮಳಿಗೆಗಳಲ್ಲಿ ವಿವಿಧ ರೀತಿಯ ಉತ್ಪನ್ನಗಳ ಮಾರಾಟ, ಗ್ರಾಮೀಣಾಭಿವೃದ್ಧಿ ಯೋಜನೆಗ ಳ ಪುಟ್ಟ ಅವಲೋಕನ, ಸ್ವ ಉದ್ಯೋಗಗಳ ಪರಿಕಲ್ಪನೆ, ಶ್ರೀ ಕ್ಷೇತ್ರ ಧರ್ಮಸ್ಥಳದ ವಿವಿಧ ಶಿಕ್ಷಣ ಸಂಸ್ಥೆಗಳ ಮುನ್ನೋಟ, ಧರ್ಮೋತ್ಥಾನ ಟ್ರಸ್ಟ್, ರತ್ನಮಾನಸ, ಸಿರಿ, ರುಡ್‌ಸೆಟ್, ಕೃಷಿ ಮೊದಲಾದ ಪ್ರದರ್ಶನ ನಡೆಯುತ್ತದೆ. ವಸ್ತುಪ್ರದರ್ಶನ ಮಂಟಪದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ. ಈಗ ಇದು ಶ್ರೇಷ್ಠ ಮಟ್ಟದ ಕಾರ್ಯಕ್ರಮಗಳಿಗೆ ವೇದಿಕೆಯಾಗಿದೆ. ಕಲಾವಿದರು ಈ ವೇದಿಕೆಯ ಮೂಲಕ ತಮ್ಮ ಮೊದಲ ಕಾರ್ಯಕ್ರಮವನ್ನು ನಡೆಸಿ, ಕಲಾಬದುಕನ್ನು ಪ್ರಾರಂಭಿಸುತ್ತಾರೆ. ಶ್ರೀ ಕ್ಷೇತ್ರವು ಕಳೆದ 600 ವರ್ಷಗಳಿಂದಲೂ ನಿರಂತರವಾಗಿ ನಡೆದುಕೊಂಡು ಬರುತ್ತಿರುವ ಅನ್ನದಾನ, ವಿದ್ಯಾದಾನ, ಔಷಧಿದಾನ ಹಾಗೂ ಅಭಯದಾನಗಳೆಂಬ ಚತುರ್ದಾನಗಳ ಮೂಲಕ ನಿಜಾರ್ಥದಲ್ಲಿ ಶ್ರೀ ಹೆಗ್ಗಡೆಯವರು ಧರ್ಮಸ್ಥಳವನ್ನು ದೇಶಕ್ಕೆ ಒಂದು ಮಾರ್ಗದರ್ಶಿ ಸಂಸ್ಥೆಯಾಗಿ ರೂಪಿಸಿದ್ದಾರೆ. ಇಲ್ಲಿನ ಶಿಸ್ತು, ಸ್ವಚ್ಛತೆ, ಇಲ್ಲಿನ ಸಿಬ್ಬಂದಿಯವರ ಪ್ರೀತಿಯ ಆತಿಥ್ಯ ಎಲ್ಲವೂ ಅನುಕರಣೀಯ. ಬೃಹತ್ ಯೋಜನೆಗಳನ್ನು ಕೈಗೊಳ್ಳಬೇಕಿದ್ದರೆ ಅದು ಕೇವಲ ಅಧಿಕಾರ, ಹಣದಿಂದ ಮಾತ್ರ ಸಾಧ್ಯವಿಲ್ಲ. ಅಧಿಕಾರಿಯಲ್ಲಿ ಉತ್ತಮ ಭಾವನೆ, ಶುದ್ಧಚಾರಿತ್ರ್ಯ, ನೈತಿಕತೆ ಇರ ಬೇಕಾಗುತ್ತದೆ. ಧರ್ಮಸ್ಥಳದ ವಿಚಾರದಲ್ಲಿ ಇದು ಅಕ್ಷರಶಃ ಸತ್ಯವಾಗಿದೆ. ಶ್ರೀ ಹೆಗ್ಗಡೆಯವರ ಸಮಾಜಮುಖಿ ಚಿಂತನಾ ಕಾರ್ಯ ಕ್ರಮಗಳಿಂದ ಸಾಧಿತವಾಗಿದೆ. ಧರ್ಮಸ್ಥಳದಲ್ಲಿ ಯೋಜನೆಗಳನ್ನು ರಚಿಸಿ, ಅನುಷ್ಠಾನಗೊಳಿಸಿ ಕೈಬಿಡುವ ಪದ್ಧತಿ ಇಲ್ಲ. ನಾಡಿನ ಇನ್ನಿತರ ಸಂಸ್ಥೆಗಳಿಗೆ ಪ್ರೇರಣೆಯಾಗುತ್ತಿರುವುದು. ಪರಿವರ್ತನೆ ತನ್ಮೂಲಕ ಸದೃಢ ಸಮಾಜ ನಿರ್ಮಾಣದ ಗುರಿ ಈ ಯೋಜನೆಗಳಾಗಿವೆ. ಮುಖ್ಯವಾಗಿ ವೈಭವವನ್ನು ನಿಯಂತ್ರಿಸುವ ಸಾಮೂಹಿಕ ವಿವಾಹ, ಸ್ವಾವಲಂಬಿಗಳನ್ನಾಗಿ ಮಾಡುವ ಗ್ರಾಮಾಭಿವೃದ್ಧಿ ಯೋಜನೆ, ನಿರುದ್ಯೋಗಿಗಳನ್ನು ಸಮರ್ಥ ಉದ್ಯೋಗಿಗಳನ್ನಾಗಿಸುವ ರುಡ್‌ಸೆಟ್, ಪುರಾತನ ದೇವಾಲಯಗಳ ಜೀರ್ಣೋದ್ಧಾರ ಮಾಡುವ ಧರ್ಮೋತ್ಥಾನ ಟ್ರಸ್ಟ್, ಮದ್ಯಮುಕ್ತರನ್ನಾಗಿಸುವ ಮದ್ಯವರ್ಜನ ಶಿಬಿರ, ಭಜನಾ ಪರಂಪರೆ ಮುಂದುವರಿಸುವ ಭಜನಾ ಕಮ್ಮಟ, ತುಳುಭಾಷೆ ಉಳಿವಿಗಾಗಿ ನಡೆಸಿದ ವಿಶ್ವತುಳು ಸಮ್ಮೇಳನ, ಯೋಗ ಮತ್ತು ನೈತಿಕ ಶಿಕ್ಷಣ ಕಾರ್ಯಕ್ರಮಗಳು. ಪ್ರಾಚೀನ ಸಂಸ್ಕೃತಿಯ ಸಂರಕ್ಷಣೆಗಾಗಿ ರೂಪುಗೊಂಡ ಮಂಜೂಷಾ ಮ್ಯೂಸಿಯಂ, ಅಕ್ಷರ ಸಂಸ್ಕೃತಿಯನ್ನು ರಕ್ಷಿಸುವ 'ಪ್ರಾಚೀನ ಹಸ್ತಪ್ರತಿ ಭಂಡಾರ 'ಶ್ರೀ ಮಂಜುನಾಥೇಶ್ವರ ಸಂಸ್ಕೃತಿ ಸಂಶೋಧನ ಪ್ರತಿಷ್ಠಾನ' ಹೀಗೆ ಹತ್ತು ಹಲವು ಕಾರ್ಯಕ್ರಮಗಳು ನಾಡಿನ ಕಣ್ತೆರೆಸಿವೆ. ಹೀಗೆ ಶ್ರೀ ಕ್ಷೇತ್ರವು ಕಲೆ, ಸಾಹಿತ್ಯ, ಧರ್ಮ, ಸಂಸ್ಕೃತಿಗಳನ್ನು ಪೋಷಿಸುವ ಸಾಂಸ್ಕೃತಿಕ ಕೇಂದ್ರವಾಗಿದೆ.

ಅದರೊಂದಿಗೆ ಕ್ಷೇತ್ರಕ್ಕೆ ವಿಶಿಷ್ಟವೆನಿಸಿರುವ ನ್ಯಾಯಪದ್ಧತಿ ಇಂದಿಗೂ ಇಲ್ಲಿ ಜೀವಂತವಿದೆ. ಹಾಗೂ ಈ ನ್ಯಾಯದಾನ ಪರಂಪರೆಯು ಅತ್ಯಂತ ಗೌರವಯುತವಾದ, ಆರೋಗ್ಯಕರ, ಸಮಾಜಮುಖಿ ನಿಲುವನ್ನು ಪಡೆದ ಯಶಸ್ವಿ ಪದ್ಧತಿಯಾಗಿದೆ. ಶ್ರೀ ಹೆಗ್ಗಡೆಯವರು ಬೀಡಿನ ಚಾವಡಿಯಲ್ಲಿ ಕುಳಿತಾಗ ವೈಯಕ್ತಿಕ ಅಥವಾ ಸಾಂಸ್ಕೃತಿಕ ನೆಲೆಯಲ್ಲಿ ದಾನ ಕೇಳಿದರೆ 'ಇಲ್ಲ' ಎನ್ನುವಂತಿಲ್ಲ. ದಾನ ಕೇಳುತ್ತಿರುವ ಹಿನ್ನಲೆ, ಉದ್ದೇಶ, ಯೋಗ್ಯತೆ ಗನುಗುಣವಾಗಿ ದಾನವು ದೊರೆಯುತ್ತದೆ. ಹೆಗ್ಗಡೆಯವರ ಮನಕ್ಕೆ ಕ್ಷಣದಲ್ಲಿ ಸ್ವಾಮಿಯ ಪ್ರೇರಣೆ ಆದಂತೆ ನೀಡುವ 'ಕೈಧರ್ಮ' ದಾನ ವ್ಯಾಪ್ತಿಯನ್ನು ಹೇಳುವಂತಿಲ್ಲ. ಈ ದಾನಕ್ಕೆ ಯಾವುದೇ ಮತ, ಧರ್ಮದ ನಿರ್ಬಂಧವಿಲ್ಲ. ಪರಂಪರೆ ಮತ್ತು ಆಧುನಿಕತೆಯ ಸಮನ್ವಯ ಧರ್ಮಸ್ಥಳ ದಾನ ಪರಂಪರೆಯ ವೈಶಿಷ್ಟ್ಯ ಎಂಬ ಶ್ರೀ ಹೆಗ್ಗಡೆಯವರ ಮಾತು ಸ್ಮರಣೀಯ. ಹೆಗ್ಗಡೆಯವರ ವೈಯಕ್ತಿಕ ಜೀವನ ನಿರಾಡಂಬರದ ಗೋಪುರಕ್ಕೆ ನಿರಹಂಕಾರದ ಕಳಸವೆನ್ನುವಂತಿದೆ. ಸೌಮ್ಯ, ಪ್ರಸನ್ನ, ಪ್ರಫುಲ್ಲ ಮುಖಮುದ್ರೆ, ಶುಭಸರಳ, ನಿಷ್ಕಳಂಕ ಚಾರಿತ್ರ್ಯ, ನಿರಂತರ ಕರ್ತವ್ಯ ತತ್ಪರತೆ, ನಾಡುನುಡಿಗಳ ಪ್ರೇಮ, ನಾಡಿಗರ ಮೇಲ್ಮೆಗಾಗಿ ದಣಿವಿಲ್ಲದ ದುಡಿತ, ನಿತ್ಯ ಅಸಂಖ್ಯ ಆಸ್ತಿಕರಿಗೆ ಅನ್ನಸಂತರ್ಪಣೆ, ಕಲ್ಯಾಣ ಮಂಟಪಗಳ, ವಿದ್ಯಾಭವನಗಳ, ಭವನಗಳ ನಿರ್ಮಾಣಕಾರ್ಯ, ಅಗಣಿತ ಸಾಂಸ್ಕೃತಿಕ ಸಂಸ್ಥೆಗಳಿಗೆ ಧಾರಳವಾದ ದಾನಗಳು – ಸ್ಥಾನಮಹಿಮೆಗೆ ವ್ಯಕ್ತಿಗರಿಮೆ ಸೇರಿದಂತೆ ಎಂಥ ಅದ್ಭುತ ಸಾಧನೆಗಳನ್ನು ಸಾಧಿಸಬಹುದೆಂಬುದಕ್ಕೆ ಗೌರವದ ಧರ್ಮಾತ್ಮ ಶ್ರೀ ಡಿ.ವೀರೇಂದ್ರ ಹೆಗ್ಗಡೆಯವರೇ ನಿದರ್ಶನ.




॥ ಓಂ ಶ್ರೀ ಮಂಜುನಾಥಾಯ ನಮಃ ॥ ॥ ಓಂ ಶ್ರೀ ಚಂದ್ರನಾಥಾಯ ನಮಃ ॥







ಶ್ರೀ ಕ್ಷೇತ್ರ ಧರ್ಮಸ್ಥಳ
ಲಕ್ಷದೀಪೋತ್ಸವ

ಶ್ರೀ ಕ್ಷೇತ್ರ ಧರ್ಮಸ್ಥಳದಲ್ಲಿ ಕಾಲಾವಧಿಯಂತೆ ಶ್ರೀ ಮಂಜುನಾಥ ಸ್ವಾಮಿಯ ಸನ್ನಿಧಿಯಲ್ಲಿ ಜರಗುವ ಲಕ್ಷದೀಪೋತ್ಸವವು
ತಾ. 15-11-2025 ರಿಂದ ತಾ. 19-11-2025ರ ವರೆಗೆ ನಡೆಯಲಿದ್ದು ನವಂಬರ್ 18 ಮತ್ತು 19ರಂದು
93ನೇ ವರ್ಷದ ಸರ್ವಧರ್ಮ ಮತ್ತು ಸಾಹಿತ್ಯ ಸಮ್ಮೇಳನಗಳು ನಡೆಯಲಿವೆ.

**ಧಾರ್ಮಿಕ ಕಾರ್ಯಕ್ರಮಗಳು** — ಪ್ರತಿದಿನ ರಾತ್ರಿ ಗಂಟೆ 9-00ರ ನಂತರ

| | | |
|---|---|---|
| 15-11-2025 | ಶನಿವಾರ | ಹೊಸ ಕಟ್ಟೆ ಉತ್ಸವ |
| 16-11-2025 | ಆದಿತ್ಯವಾರ | ಕೆರೆ ಕಟ್ಟೆ ಉತ್ಸವ |
| 17-11-2025 | ಸೋಮವಾರ | ಲಲಿತೋದ್ಯಾನ ಉತ್ಸವ |
| 18-11-2025 | ಮಂಗಳವಾರ | ಕಂಚಿಮಾರು ಕಟ್ಟೆ ಉತ್ಸವ |
| 19-11-2025 | ಬುಧವಾರ | ಗೌರಿಮಾರು ಕಟ್ಟೆ ಉತ್ಸವ |
| 20-11-2025 | ಗುರುವಾರ | ಶ್ರೀ ಚಂದ್ರನಾಥ ಸ್ವಾಮಿಯ ಸಮವಸರಣ ಪೂಜೆ |

**ವಸ್ತುಪ್ರದರ್ಶನ** — 15 ರಿಂದ 19 ನವೆಂಬರ್ 2025
ಸ್ಥಳ : ಶ್ರೀ ಮಂಜುನಾಥೇಶ್ವರ ಪ್ರೌಢ ಶಾಲೆಯ ಕ್ರೀಡಾಂಗಣ, ಧರ್ಮಸ್ಥಳ
ದಿನಾಂಕ : 15-11-2025ನೇ ಶನಿವಾರ ಸಮಯ : ಬೆಳಿಗ್ಗೆ ಗಂಟೆ 09-30
ರಾಜ್ಯ ಮಟ್ಟದ ವಸ್ತುಪ್ರದರ್ಶನ ಉದ್ಘಾಟನೆ
ಸನ್ಮಾನ್ಯ ಶ್ರೀ ಹರೀಶ್ ಪೂಂಜ, ಶಾಸಕರು, ಬೆಳ್ತಂಗಡಿ ವಿಧಾನಸಭಾ ಕ್ಷೇತ್ರ
ದಿನಾಂಕ : 15-11-2025 ರಿಂದ 19-11-2025ರ ವರೆಗೆ
ಸಮಯ : ಸಂಜೆ ಗಂಟೆ 6-00 ರಿಂದ ರಾತ್ರಿ ಗಂಟೆ 11-30ರ ತನಕ
ವಿವಿಧ ಮನೋರಂಜನೆಯ ಸಾಂಸ್ಕೃತಿಕ ಕಾರ್ಯಕ್ರಮಗಳು

**ಲಲಿತಕಲಾ ಗೋಷ್ಠಿ** — 17-11-2025ನೇ ಸೋಮವಾರ | ಸ್ಥಳ : ಅಮೃತವರ್ಷಿಣಿ ಸಭಾಭವನ
ಸಂಜೆ ಗಂಟೆ 5-30 ರಿಂದ 7-00 : ನಾಗಸ್ವರ ವಾದನ
ರಾತ್ರಿ ಗಂಟೆ 7-00 ರಿಂದ 8-15 : ಹಿಂದುಸ್ತಾನಿ ಸಂಗೀತ ಮತ್ತು ಭಜನ್ – ಕೌಶಿಕ್ ಐತಾಳ್ ಮತ್ತು ತಂಡ, ಬೆಂಗಳೂರು
ರಾತ್ರಿ ಗಂಟೆ 8-15 ರಿಂದ 10-15 : 'ಸನಾತನೀ' ನೃತ್ಯವೈಭವ – ನಿರ್ದೇಶನ - ಸುಜಯ್ ಶಾನಭಾಗ, ಹುಬ್ಬಳ್ಳಿ

**ಸರ್ವಧರ್ಮ ಸಮ್ಮೇಳನ** — 18-11-2025ನೇ ಮಂಗಳವಾರ | ಸ್ಥಳ : ಅಮೃತವರ್ಷಿಣಿ ಸಭಾಭವನ | ಸಮಯ : ಸಂಜೆ ಗಂಟೆ 5-00ರಿಂದ
ಉದ್ಘಾಟಕರು : ಡಾ. ಎಂ. ಬಿ. ಪಾಟೀಲ್, ಸಚಿವರು, ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಹಾಗೂ ಮೂಲಸೌಕರ್ಯಾಭಿವೃದ್ಧಿ ಇಲಾಖೆ , ಕರ್ನಾಟಕ ಸರ್ಕಾರ
ಅಧ್ಯಕ್ಷತೆ : ಪರಮಪೂಜ್ಯ ಶ್ರೀಮಜ್ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ಸ್ವಯಂಪ್ರಕಾಶ ಸಚ್ಚಿದಾನಂದ ಸರಸ್ವತೀ ಸ್ವಾಮೀಜಿಗಳು, ಹರಿಹರಪುರ
ಉಪನ್ಯಾಸಕರು : ಶ್ರೀ ಎಸ್. ಸೂರ್ಯಪ್ರಕಾಶ್ ಪಂಡಿತ್, ಮುಖ್ಯ ಉಪಸಂಪಾದಕರು, ಪ್ರಜಾವಾಣಿ, ಬೆಂಗಳೂರು
: ಶ್ರೀ ತನ್ವೀರ್ ಅಹಮ್ಮದ್ ಉಲ್ಲಾ, ಅಂಕಣಕಾರರು ಮತ್ತು ರಾಷ್ಟ್ರೀಯ ಚಿಂತಕರು, ಬೆಂಗಳೂರು
ಸಾಂಸ್ಕೃತಿಕ ಕಾರ್ಯಕ್ರಮ : ರಾತ್ರಿ ಗಂಟೆ 8-30 ರಿಂದ
ಭರತನಾಟ್ಯ - ಶ್ರೀದೇವಿ ನೃತ್ಯಾಲಯ, ಚೆನ್ನೈ, ನಿರ್ದೇಶನ - ವಿದುಷಿ ಡಾ. ಶೀಲಾ ಉನ್ನಿಕೃಷ್ಣನ್

**ಸಾಹಿತ್ಯ ಸಮ್ಮೇಳನ** — 19-11-2025ನೇ ಬುಧವಾರ | ಸ್ಥಳ : ಅಮೃತವರ್ಷಿಣಿ ಸಭಾಭವನ | ಸಮಯ : ಸಂಜೆ ಗಂಟೆ 5-00ರಿಂದ
ಉದ್ಘಾಟಕರು : ಪ್ರೊ. ಪ್ರೇಮಶೇಖರ, ಹಿರಿಯ ಸಾಹಿತಿಗಳು ಮತ್ತು ಅಂಕಣಕಾರರು
ಅಧ್ಯಕ್ಷತೆ : ಶ್ರೀ ವಿಶ್ವೇಶ್ವರ ಭಟ್, ಮುಖ್ಯ ಸಂಪಾದಕರು, 'ವಿಶ್ವವಾಣಿ', ಬೆಂಗಳೂರು
ಉಪನ್ಯಾಸಕರು : ಶ್ರೀಮತಿ ಶಾಂತಾ ನಾಗಮಂಗಲ, ಲೇಖಕಿ ಮತ್ತು ಗಮಕ ವ್ಯಾಖ್ಯಾತೃ
: ಡಾ. ರಘು ವಿ., ಶೈಕ್ಷಣಿಕ ಆಡಳಿತಾಧಿಕಾರಿ, ಆರ್. ಎಮ್. ಎಸ್. ಶಿಕ್ಷಣಸಂಸ್ಥೆಗಳು, ಬೆಂಗಳೂರು ಹಾಗೂ ಸಂಪಾದಕರು, ವಿವೇಕಹಂಸ ಮಾಸಪತ್ರಿಕೆ
: ಡಾ. ಬಿ. ಎಂ. ಶರಭೇಂದ್ರ ಸ್ವಾಮಿ, ಧಾರವಾಡ, ಸಾಹಿತಿಗಳು ಮತ್ತು ಆಕಾಶವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರು
ಸಾಂಸ್ಕೃತಿಕ ಕಾರ್ಯಕ್ರಮ
ರಾತ್ರಿ ಗಂಟೆ 8-30 ರಿಂದ 'ಸಂಗೀತ ಸಂಜೆ' ರಾಹುಲ್ ವೆಲ್ಲಾಲ್ ಮತ್ತು ತಂಡ ಬೆಂಗಳೂರು
ರಾತ್ರಿ ಗಂಟೆ 9-45ರಿಂದ ದಕ್ಷಯಜ್ಞ (ಕವಿ-ದೇವಿದಾಸ) ಬಡಗುತಿಟ್ಟು ಪ್ರಸಿದ್ಧ ಕಲಾವಿದರ ಕೂಡುವಿಕೆಯಿಂದ ಯಕ್ಷಗಾನ

ಶ್ರೀ ಕ್ಷೇತ್ರದ ಅಧಿಕೃತ ಯುಟ್ಯೂಬ್ ಮತ್ತು ಫೇಸ್‌ಬುಕ್
LIVE
YouTube www.youtube.com/c/SriKshetraDharmasthalaManjunatha
facebook.com/Sri.Kshetra.Dharmasthala.Manjunatha

ಆದರದ ಆಮಂತ್ರಣ
ಡಾ|| ಡಿ. ವೀರೇಂದ್ರ ಹೆಗ್ಗಡೆಯವರು
ಅಧ್ಯಕ್ಷರು, ಸ್ವಾಗತ ಸಮಿತಿ, ಸರ್ವಧರ್ಮ ಮತ್ತು ಸಾಹಿತ್ಯ ಸಮ್ಮೇಳನಗಳು, ಧರ್ಮಸ್ಥಳ - 574 216, ದ.ಕ.


KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021